# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

| ಸಂಪುಟ – 01 | ಸಂಚಿಕೆ – 33 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ : 08–08–2023 ಮಂಗಳವಾರ | ಪುಟ: 4 | ಬೆಲೆ : ರೂ.2–00 |
|---|---|---|---|---|---|---|
| Volume - 01 | Issue - 33 | Title- Code: KARKAN 28269 | Chitradurga | Date : 08-08-2023 Tuesday | Page: 4 | Price: Rs. 2-00 |



ಒಳ ಪುಟದ ಸುದ್ದಿಗಳು

2 ಶಿವಶಿಂಪಿ ಸಮಾಜಕ್ಕೆ ಸೌಲಭ್ಯಗಳನ್ನು ದೊರಕಿಸುವಲ್ಲಿ ಪ್ರಾಮಾಣಿಕ ಪ್ರಯತ್ನ : ಶಾಸಕ ಕೆ.ಸಿ.ವಿರೇಂದ್ರ

3 ಆರೋಗ್ಯಕರ ಮಕ್ಕಳು ಹಾಗೂ ಸದೃಢ ಸಮಾಜಕ್ಕೆ ಸಹಕರಿಸಿ : ಡಿಸಿ ದಿವ್ಯ ಪ್ರಭು

4 ಪೈಪ್‌ಲೈನ್ ಸ್ಥಿತಿಗತಿ ಪರಿಶೀಲಿಸಿ, ಲೀಕೇಜ್‌ಗಳಿದ್ದಲ್ಲಿ ಸರಿಪಡಿಸಿ – ಸಚಿವ ಎಂ. ರಹೀಂ ಖಾನ್



ಸುದ್ದಿ ಹಾಗೂ ಜಾಹೀರಾತಿಗಾಗಿ ಸಂಪರ್ಕಿಸಿ :
nammajananews@gmail.com
ವಾಟ್ಸ್‌ಅಪ್ ನಂ. 9686622252


# ಸರ್ಕಾರಕ್ಕೆ 7.04 ಕೋಟಿ ವಂಚಿಸಿದ ಆರೋಪದಡಿ ಮೂಡಲಗಿರಿಯಪ್ಪ ಬಂಧನ

ಚಿತ್ರದುರ್ಗ : ಹಣ ಸೆಳೆಯಲು ನಿಯಮಾನುಸಾರ ಪಾಲಿಸಬೇಕಿದ್ದ ಪ್ರಕ್ರಿಯೆಗಳನ್ನು ಮೀರಿ, ಕಾನೂನು ಬಾಹಿರವಾಗಿ, ಅಧಿಕಾರ ದುರ್ಬಳಕೆ ಮಾಡಿ, ನಿರ್ಮಿತಿ ಕೇಂದ್ರದ ಹಿಂದಿನ ಯೋಜನಾ ನಿರ್ದೇಶಕರಾಗಿದ್ದ ಕೆ.ಜಿ. ಮೂಡಲಗಿರಿಯಪ್ಪ ಅವರು, ಒಟ್ಟು 7.04 ಕೋಟಿ ರೂ. ಹಣ ದುರ್ಬಳಕೆ ಮಾಡಿರುವ ಆರೋಪಕ್ಕೆ ಸಂಬಂಧಿಸಿದಂತೆ ದೂರು ಸಲ್ಲಿಕೆಯಾದ ಹಿನ್ನೆಲೆಯಲ್ಲಿ ಚಿತ್ರದುರ್ಗ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಆ. 06 ರಂದು ಎಫ್‌ಐಆರ್ ದಾಖಲು ಮಾಡಿ ಮೂಡಲಗಿರಿಯಪ್ಪ ಅವರನ್ನು ನಿನ್ನೆ ರಾತ್ರಿ ಬಂಧಿಸಿದ್ದಾರೆ.

ಸರ್ಕಾರದ ವಿವಿಧ ಇಲಾಖೆಗಳಡಿ ಸಾರ್ವಜನಿಕ ಉದ್ದೇಶ ಹಾಗೂ ಕಾಮಗಾರಿ ಅನು ಷ್ಠಾನಕ್ಕಾಗಿ ಬಿಡುಗಡೆಯಾದ ಅನುದಾನವನ್ನು ಸಾರ್ವಜನಿಕ ಉಪ ಯೋಗವಾಗದಂತೆ ಅಲ್ಲದೆ ಅನುಷ್ಠಾನ ಏಜೆನ್ಸಿಯಾಗಿರುವ ನಿರ್ಮಿತಿ ಕೇಂದ್ರದ ಅಧ್ಯಕ್ಷರು ಮತ್ತು ಕಾರ್ಯಾಧ್ಯಕ್ಷರ ಗಮನಕ್ಕೆ ಬಾರದಂತೆ ಕೆ.ಜಿ. ಮೂಡಲಗಿರಿಯಪ್ಪ ಅವರು ಹಣ ಲಪಾಟಯಿಸಿದ್ದಾರೆ ಎಂಬ ಆರೋಪಕ್ಕೆ ಕಾನೂನು ಕ್ರಮ ಕೈಗೊಳ್ಳುವಂತೆ ನಿರ್ಮಿತಿ ಕೇಂದ್ರದ ಈಗಿನ ಯೋಜನಾ ನಿರ್ದೇಶಕ ಯು.ಆರ್. ಸತ್ಯನಾರಾಯಣರಾವ್ ಅವರು ಚಿತ್ರದುರ್ಗ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿರುತ್ತಾರೆ.

ಈ ಹಿನ್ನೆಲೆ ಕೆ.ಜಿ. ಮೂಡಲಗಿರಿಯಪ್ಪ ಕಾರ್ಯ ನಿರ್ವಹಿಸಿದ ಸಮಯದಲ್ಲಿ ನಿರ್ಮಿತಿ ಕೇಂದ್ರ ಆಡಳಿತ ಮಂಡಳಿಯ ರೂಲ್ಸ್ ಗಳನ್ನು ಉಲ್ಲಂಘಿಸಿ ಅಧಿಕಾರ ಬಳಸಿ 25 ಸಾವಿರ ರೂ. ಒಳಗಿನ ಹಲವು ಚೆಕ್‌ಗಳನ್ನು ಡ್ರಾ ಮಾಡಿದ್ದಾರೆ. ಬೇನಾಮಿ ಚೆಕ್ ಬರೆಯುವ ಮೂಲಕ ಹಣ ಪಡೆದುಕೊಂಡಿದ್ದಾರೆ. ನಕಲಿ ಬಿಲ್ ಗಳನ್ನು ಸೃಷ್ಟಿಸಿ, ಜಿಎಸ್‌ಟಿ ಇಲ್ಲದ ಸರಬರಾಜುದಾರರಿಂದ ಸಾಮಗ್ರಿಗಳನ್ನು ಪಡೆದಿರುವುದಾಗಿ ದಾಖಲೆಗಳನ್ನು ಸೃಷ್ಟಿಸಿದ್ದಾರೆ.

ಚೆಕ್ ನಲ್ಲಿ ಹಣ ಪಾವತಿಸಲು 25 ಸಾವಿರ ರೂ. ಗಳ ಆರ್ಥಿಕ ಪ್ರತ್ಯಾಯೋಜನಾ ಅಂದರೆ ಚೆಕ್ ಡ್ರಾಯಿಂಗ್ ಪವರ್ ಅನ್ನು ಸಂಸ್ಥೆಯ ಆರ್ಥಿಕ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ಚಿತ್ರದುರ್ಗ ನಿರ್ಮಿತಿ ಕೇಂದ್ರದ ಆಡಳಿತ ಮಂಡಳಿಯ ನಿರ್ಧಾರದಂತೆ, ಕಳೆದ



ಕಳೆದ 2023 ರ ಫೆಬ್ರವರಿ 24 ರಂದು ಹಿಂಪಡೆಯಲು ತೀರ್ಮಾನಿಸಲಾಗಿತ್ತು. ಹೀಗಾಗಿ ಈ ದಿನಾಂಕದ ನಂತರ ನಿರ್ಮಿತಿ ಕೇಂದ್ರದ ಎಲ್ಲ ವಹಿವಾಟುಗಳ ಕಡತಗಳಿಗೆ ಅಧ್ಯಕ್ಷರ ಹಾಗೂ ಕಾರ್ಯಾಧ್ಯಕ್ಷರ ಲಿಖಿತ ಅನುಮೋದನೆ ಪಡೆದು, ಅಲ್ಲದೆ ಚೆಕ್ ನಲ್ಲಿ ಅಧ್ಯಕ್ಷರ ಮತ್ತು ಯೋಜನಾ ನಿರ್ದೇಶಕರ ಜಂಟಿ ಸಹಿಯೊಂದಿಗೆ ವಹಿವಾಟು ನಡೆಸಲು ಕಡ್ಡಾಯಗೊಳಿಸಿ ತೀರ್ಮಾನಿಸಲಾಗಿತ್ತು. ಆದರೆ ಕೆ.ಜಿ. ಮೂಡಲಗಿರಿಯಪ್ಪ ಅವರು ಚಕ್ ಗಳಿಗೆ ಜಂಟಿ ಸಹಿ ಪಡೆಯದೇ ಸುಮಾರು 3836 ಸಂಖ್ಯೆಯ ವೋಚರ್‌ಗಳ ಮುಖಾಂತರ ವಿವಿಧ ಕಾಮಗಾರಿಗಳ ಸಂಬಂಧ ಒಟ್ಟು ರೂ. 7,04,45,790 ಗಳ ಬಿಲ್ಲುಗಳನ್ನು ಬೇನಾಮಿ ವ್ಯಕ್ತಿಗಳಿಗೆ ನೀಡಿ, ಅವರಿಂದ ಹಣ ಪಡೆದುಕೊಂಡಿರುವುದು ಕಂಡುಬಂದಿರುತ್ತದೆ.

ನಿರ್ಮಿತಿ ಕೇಂದ್ರದ ಅಧ್ಯಕ್ಷರು ಮತ್ತು ಕಾರ್ಯಾಧ್ಯಕ್ಷರ ಗಮನಕ್ಕೆ ಬಾರದೆ ಚೆಕ್ ಗಳನ್ನು ಪಡೆದು ಹಣ ಡ್ರಾ ಮಾಡಿರುತ್ತಾರೆ. ನಿರ್ಮಿತಿ ಕೇಂದ್ರದ ಹಿಂದಿನ ಯೋಜನಾ ನಿರ್ದೇಕರಾಗಿದ್ದ ಕೆ.ಜಿ. ಮೂಡಲಗಿರಿಯಪ್ಪ ಹಾಗೂ ಪ್ರಕರಣದಲ್ಲಿ ಭಾಗಿಯಾದ ಇತರರು ಕುರಿತು ನಿಯಮಾನುಸಾರ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕರಾದ ಯು. ಆರ್. ಸತ್ಯನಾರಾಯಣರಾವ್ ಅವರು ದೂರು ಸಲ್ಲಿಸಿದ ಹಿನ್ನೆಲೆಯಲ್ಲಿ ಚಿತ್ರದುರ್ಗ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಾಗಿ ನಂತರ ಈ ಪ್ರಕರಣವನ್ನು ಸೈಬರ್ ಕ್ರೈಂ ಗೆ ವರ್ಗಾಯಿಸಿದ್ದು ನಿನ್ನೆ ರಾತ್ರಿ ಸೈಬರ್ ಕ್ರೈಂ ಪೊಲೀಸರು ಬಂಧಿಸಿದ್ದಾರೆ.

# ಕಾಂಗ್ರೆಸ್ ಜನವಿರೋಧಿ ನೀತಿ ಅನುಸರಿಸುತ್ತಿದೆ : ಜಿ.ಹೆಚ್.ತಿಪ್ಪಾರೆಡ್ಡಿ

**ಚಿತ್ರದುರ್ಗ** : ರಾಜ್ಯದಲ್ಲಿ ಬಿಜೆಪಿ. ಅಧಿಕಾರದಲ್ಲಿದಾಗ ಜಾರಿಗೆ ತಂದ ಯೋಜನೆಗಳನ್ನು ಈಗಿನ ಕಾಂಗ್ರೆಸ್ ಸರ್ಕಾರ ರದ್ದುಪಡಿಸಿರುವುದನ್ನು ವಿರೋಧಿಸಿ ಭಾರತೀಯ ಜನತಾ ಪಾರ್ಟಿಯಿಂದ ನಗರದಲ್ಲಿ ಸೋಮವಾರ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ನಗರದ ನೀಲಕಂಠೇಶ್ವರಸ್ವಾಮಿ ದೇವಸ್ಥಾನದಿಂದ ಮೆರವಣಿಗೆ ಮೂಲಕ ಒನಕೆ ಓಬವ್ವ ವೃತ್ತಕ್ಕೆ ಆಗಮಿಸಿದ ಪ್ರತಿಭಟನಾಕಾರರು ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ದ ಧಿಕ್ಕಾರಗಳನ್ನು ಕೂಗಿದರು.

ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿ 2018 ರಿಂದ 23 ರವರೆಗೆ ರಾಜ್ಯದಲ್ಲಿ ಅಧಿಕಾರದಲ್ಲಿದ್ದ ಬಿಜೆಪಿ.ಸರ್ಕಾರ ಬಡವರು, ರೈತರು, ಕೂಲಿ ಕಾರ್ಮಿಕರು, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದವರಿಗಾಗಿ ಜಾರಿಗೆ ತಂದ ಅನೇಕ ಯೋಜನೆಗಳನ್ನು ರದ್ದುಪಡಿಸಿರುವ ಕಾಂಗ್ರೆಸ್ ಸರ್ಕಾರ ರೈತರು ಕೂಲಿ ಕಾರ್ಮಿಕರ ಮಕ್ಕಳ ಶಿಕ್ಷಣ–ಕ್ಕಾಗಿ ನೀಡುತ್ತಿದ್ದ ವಿದ್ಯಾರ್ಥಿ ವೇತನವನ್ನು ನಿಲ್ಲಿಸಿದೆ. ಎ.ಪಿ.ಎಂ.ಸಿ. ಕಾಯಿದೆಯನ್ನು ರದ್ದುಪಡಿಸಿರುವುದು ರೈತರಿಗೆ ಮಾರಕವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ವಿದ್ಯುತ್ ದರವನ್ನು ಯೂನಿಟ್‌ಗೆ ಏಳು ರೂ.ಗೆ ಹೆಚ್ಚಿಸಿರುವುದು ಅವೈಜ್ಞಾನಿಕ. ರೈತರ ಮಕ್ಕಳ ವಿದ್ಯಾನಿಧಿ ಯೋಜನೆಗಾಗಿ ಬಜೆಟ್‌ನಲ್ಲಿ ಮೀಸಲಿಟ್ಟಿದ್ದ 438 ಕೋಟಿ ರೂ.ಗಳನ್ನು ಹಿಂದಕ್ಕೆ ಪಡೆದು ಗೋಶಾಲೆಗಳನ್ನು ರದ್ದುಪಡಿಸಿದ ರಾಜ್ಯ ಕಾಂಗ್ರೆಸ್ ಸರ್ಕಾರ ನಮ್ಮ ಸರ್ಕಾರದ ಹದಿನೆಂಟು ಯೋಜನೆಗಳನ್ನು ಹಿಂದಕ್ಕೆ ಪಡೆದು ಜನ ವಿರೋಧಿ ರೈತ ವಿರೋಧಿ ನೀತಿ ಅನುಸರಿಸುತ್ತಿದೆ ಎಂದು ಕಿಡಿಕಾರಿದರು.





ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಮಾತನಾಡಿ ವಿಧಾನಸಭೆ ಚುನಾವಣಾ ಪೂರ್ವದಲ್ಲಿಯೇ ಐದು ಗ್ಯಾರೆಂಟಿಗಳನ್ನು ಘೋಷಿಸಿ ರಾಜ್ಯದ ಜನರನ್ನು ಮರಳು ಮಾಡಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರ ತುಂಬಾ ದಿನ ಉಳಿಯುವುದಿಲ್ಲ. ಮದ್ಯದ ಮೇಲೆ ಶೇ.20 ರಷ್ಟು ತೆರಿಗೆ ವಿಧಿಸಿ ದುಡಿಯುವ ವರ್ಗಕ್ಕೆ ಅನ್ಯಾಯ ಮಾಡಿ ಸಿರಿವಂತರಿಗೆ ಅನುಕೂಲ ಮಾಡಲು ಹೊರಟಿದೆ. ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗದ ಹನ್ನೊಂದು ಸಾವಿರ ಕೋಟಿ ರೂ.ಗಳನ್ನು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಬೇರೆ ಯೋಜನೆಗಳಿಗೆ ಬಳಸಿ ರಾಜ್ಯದ ಐದು ಕೋಟಿ ಜನರಿಗೆ ಮೋಸ ಮಾಡಿದ್ದಾರೆ.


3ನೇ ಪುಟಕ್ಕೆ


## ಫಾಸ್ಟ್ ನ್ಯೂಸ್

## ರಾಹುಲ್ ಗಾಂಧಿಗೆ ಮರಳಿ ಒಲಿದ ಸಂಸದ ಸ್ಥಾನ



**ನವದೆಹಲಿ** : ಕಾಂಗ್ರೆಸ್‌ನ ಯುವ ನಾಯಕ ರಾಹುಲ್‌ಗಾಂಧಿ ಅವರ ಲೋಕಸಭಾ ಸಚಿವಾಲಯ ಅನರ್ಹತೆ ರದ್ದಾಗಿದ್ದು ಅವರ ಸದಸ್ಯತ್ವ ಪುನರ್ ಸ್ಥಾಪಿಸುವ ಆದೇಶ ಹೊರಬಿದ್ದಿದೆ. ಲೋಕಸಭಾ ಸಚಿವಾಲಯ ರಾಹುಲ್‌ಗಾಂಧಿ ಅವರ ಸಂಸತ್ ಸದಸ್ಯತ್ವವನ್ನು ರದ್ದು ಮಾಡಿದ್ದು ರಾಹುಲ್‌ಗಾಂಧಿ ಮರಳಿ ಲೋಕಸಭಾ ಸದಸ್ಯರಾಗಿದ್ದಾರೆ.

ಮೋದಿ ಉಪನಾಮಕ್ಕೆ ಸಂಬಂಧಿಸಿದಂತೆ ಸೂರತ್ ನ್ಯಾಯಾಲಯ ರಾಹುಲ್‌ಗಾಂಧಿ ಅವರಿಗೆ 2 ವರ್ಷಗಳ ಜೈಲು ಶಿಕ್ಷೆ ವಿಧಿಸಿತ್ತು. ಈ ಆದೇಶಕ್ಕೆ ಸುಪ್ರೀಂಕೋರ್ಟ್ ತಡೆ ನೀಡಿದ್ದ ಬೆನ್ನಲ್ಲೆ ರಾಹುಲ್‌ಗಾಂಧಿ ಅವರ ಲೋಕಸಭಾ ಸದಸ್ಯತ್ವವನ್ನು ಪುನರ್ ಸ್ಥಾಪಿಸಲಾಗಿದೆ.

ಈ ಸಂಬಂಧ ಹೇಳಿಕೆ ಬಿಡುಗಡೆ ಮಾಡಿರುವ ಲೋಕಸಭಾ ಸಚಿವಾಲಯ ರಾಹುಲ್ ಆವರ ಸದಸ್ಯತ್ವ ಅನರ್ಹತೆಯ ಆದೇಶವನ್ನು ಹಿಂಪಡೆಯಲಾಗಿದ್ದು ಸದಸ್ಯತ್ವವನ್ನು ಮರು ಸ್ಥಾಪಿಸಲಾಗಿದೆ ಎಂದು ತಿಳಿಸಿದೆ. ರಾಹುಲ್‌ಗಾಂಧಿ ಅವರು ಮೋದಿ ಉಪನಾಮ ಪ್ರಕರಣದಲ್ಲಿ ದೋಷಿ ಎಂದು ಸೂರತ್ ನ್ಯಾಯಾಲಯ ತೀರ್ಪು ನೀಡಿದ್ದ ಮಾರನೇ ದಿನವೇ ಲೋಕಸಭೆಯ ಪ್ರಧಾನ ಕಾರ್ಯದರ್ಶಿ ಅವರ ರಾಹುಲ್‌ಗಾಂಧಿ ಅವರ ಸದಸ್ಯತ್ವ ಅನರ್ಹಗೊಳಿಸಿ ಆದೇಶ ಹೊರಡಿಸಿದ್ದರು.

ಸೂರತ್ ನ್ಯಾಯಾಲಯದ ಅದೇಶಕ್ಕೆ ಕಳೆದ ಶುಕ್ರವಾರ ಸುಪ್ರೀಂಕೋರ್ಟ್ ತಡೆ ನೀಡಿತ್ತು. ನ್ಯಾಯಾಲಯ ಶಿಕ್ಷೆ ವಿಧಿಸಿದಾಗ ಸಂಸತ್ ಸದಸ್ಯತ್ವವನ್ನು ಎಷ್ಟು ವೇಗವಾಗಿ ಅನರ್ಹಗೊಳಿಸಲಾಯಿತೋ ಈಗ ಅದೇ ವೇಗದಲ್ಲಿ ಸದಸ್ಯತ್ವ ಅನರ್ಹತೆಯನ್ನು ರದ್ದು ಮಾಡಬೇಕು ಎಂದು ಕಾಂಗ್ರೆಸ್ ಪಕ್ಷ ಶನಿವಾರ ಆಗ್ರಹಿಸಿತ್ತು.

ಸಂಸತ್ ಕಲಾಪಗಳಿಗೆ ಶನಿವಾರ ಭಾನುವಾರ ರಜಾ ಇದ್ದ ಕಾರಣ ಅನರ್ಹತೆಯನ್ನು ರದ್ದು ಮಾಡುವ ತೀರ್ಮಾನಗಳನ್ನು ಮಾಡಲಾಗಿರಲಿಲ್ಲ. ಇಂದು ರಾಹುಲ್‌ಗಾಂಧಿ ರವರ ಅನರ್ಹತೆಯನ್ನು ರದ್ದುಮಾಡುತ್ತಾರೋ ಇಲ್ಲವೋ ಎಂಬ ಕುತೂಹಲವೂ ಇತ್ತು. ಈ ಎಲ್ಲ ಕುತೂಹಲಗಳಿಗೆ ತೆರೆ ಎಳೆದಿರುವ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ಇಂದಿನ ಲೋಕಸಭಾ ಕಲಾಪ ಆರಂಭಕ್ಕೂ ಮುನ್ನವೇ ರಾಹುಲ್‌ಗಾಂಧಿ ಅನರ್ಹತೆಯ ಆದೇಶವನ್ನು ರದ್ದುಪಡಿಸಿದ್ದಾರೆ.ಹೀಗಾಗಿ, ರಾಹುಲ್‌ಗಾಂಧಿ ಅವರು ಮರಳಿ ತಮ್ಮ ಲೋಕಸಭಾ ಸದಸ್ಯತ್ವವನ್ನು ಪಡೆದುಕೊಂಡಿದ್ದಾರೆ.

## ವಿಶ್ವ ಹೆಪಟೈಟಿಸ್ ದಿನ–2023

**ದಾವಣಗೆರೆ** : ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ ನಾಗರಾಜ್ ಇವರ ಅಧ್ಯಕ್ಷತೆಯಲ್ಲಿ ?ಲ ಆಗಸ್ಟ್ 9 ರಂದು ಬೆಳಿಗ್ಗೆ 10 ಗಂಟೆಗೆ ಚಿಗಟೇರಿ ಜಿಲ್ಲಾ ಆಸ್ಪತ್ರೆಯ ಡಿ.ಇ.ಐ.ಸಿ ಸಭಾ ಕೊಠಡಿಯಲ್ಲಿ ವಿಶ್ವ ಹೆಪಟೈಟಿಸ್ ದಿನ–2023ರ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕದ ಪ್ರಭಾರ ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಡಾ.ಗಂಗಾಧರ್ ತಿಳಿಸಿದ್ದಾರೆ.

## ನಟ ವಿಜಯ್ ರಾಘವೇಂದ್ರ ಪತ್ನಿ ಸ್ಪಂದನ ಇನ್ನಿಲ್ಲ



**ಬೆಂಗಳೂರು** : ಚಿತ್ರರಂಗದಲ್ಲಿ ಚಿನ್ನಾರಿ ಮುತ್ತ ಎಂದೇ ಹೆಸರು ಪಡೆದಿದ್ದ ನಟ ವಿಜಯ್ ರಾಘವೇಂದ್ರ ಪತ್ನಿ ಸ್ಪಂದನ ಬ್ಯಾಂಕಾಂಕ್‌ನಲ್ಲಿ ಹೃದಯಾಘಾತ ಸಂಭವಿಸಿ ನಿಧನರಾಗಿದ್ದಾರೆ. ಈ ಸಾವಿನ ಸುದ್ದಿ ಕುಟುಂಬಸ್ಥರಿಗೆ ಬರಸಿಡಿಲಿನಂತೆ ಅಪ್ಪಳಿಸಿದೆ. ವಿದೇಶ ಪ್ರವಾಸಕ್ಕೆ ತೆರಳಿದ್ದ ಸಮಯದಲ್ಲಿ ಈ ದುರ್ಘಟನೆ ನಡೆದಿದೆ.

ಮೂಲಗಳ ಪ್ರಕಾರ ನಿನ್ನೆ ಬ್ಯಾಂಕಾಕ್‌ನಲ್ಲಿ ಹೃದಯಾಘಾತವಾಗಿತ್ತು. ತಕ್ಷಣ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಚಿಕಿತ್ಸೆ ಫಲಿಸದೆ ನಿಧನರಾಗಿದ್ದಾರೆ.ಮೃತ ಸ್ಪಂದನ, ಪತಿ ವಿಜಯ್ ರಾಘವೇಂದ್ರ ಮತ್ತು ಪುತ್ರ ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಸ್ಪಂದನ ನಿಧನರಾದ ಸುದ್ದಿ ತಿಳಿಯುತ್ತಿದ್ದಂತೆ ಇಡೀ ಕುಟುಂಬದ ಬ್ಯಾಂಕಾಂಕ್‌ಗೆ ತೆರಳಿದೆ. ನಿಧನದ ಬಗ್ಗೆ ಕುಟುಂಬದ ಸದಸ್ಯರು ಯಾವುದೇ ಮಾಹಿತಿ ಹಂಚಿಕೊಂಡಿಲ್ಲ. ಸ್ಪಂದನ ನಿವೃತ್ತ ಪೊಲೀಸ್ ಅಧಿಕಾರಿ ಬಿ.ಕೆ ಶಿವರಾಮ್ ಅವರ ಪುತ್ರಿಯಾಗಿದ್ದಾರೆ. ಪುತ್ರಿ ನಿಧನರಾದ ಸುದ್ದಿ ತಿಳಿಯುತ್ತಿದಂತೆ ಬಿ.ಕೆ ಶಿವರಾಮ್ ಮತ್ತು ಪುತ್ರನ ಜೊತೆಗೂಡಿ ವಿದೇಶದತ್ತ ತೆರಳಿದ್ದಾರೆ.




**ಇಂದಿನ ಚಿನ್ನ ಮತ್ತು ಬೆಳ್ಳಿ ದರಗಳು : 91.6 Kdm- 5540/gm | 85 kdam - 5140/gm | ಬೆಳ್ಳಿ : 67000 / ಕೆಜಿ**

# ಶಿವಶಿಂಪಿ ಸಮಾಜಕ್ಕೆ ಸೌಲಭ್ಯಗಳನ್ನು ದೊರಕಿಸುಲ್ಲಿ ಪ್ರಾಮಾಣಿಕ ಪ್ರಯತ್ನ : ಶಾಸಕ ಕೆ.ಸಿ.ವಿರೇಂದ್ರ

**ಚಿತ್ರದುರ್ಗ :** ಶಿವಶಿಂಪಿ ಸಮಾಜಕ್ಕೆ ಸರ್ಕಾರದ ವತಿಯಿಂದ, ಅರ್ಹ ಸೌಲಭ್ಯಗಳನ್ನು ದೊರಕಿಸುಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಶಾಸಕ ಕೆ.ಸಿ.ವಿರೇಂದ್ರ ಭರವಸೆ ನೀಡಿದ್ದಾರೆ.

ಚಿತ್ರದುರ್ಗ ಜಿಲ್ಲಾ ಲಿಂಗಾಯತ ಶಿವಶಿಂಪಿ ಸಮಾಜದದಿಂದ ನಗರದ ತರಾಸು ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ಕುಲಗುರು ಶ್ರೀ ಶಿವದಾಶಿಮಯ್ಯ ಜಯಂತಿ ಮತ್ತು ಪ್ರತಿಭಾ ಪುರಸ್ಕಾರ ಮತ್ತು ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಜಾತಿ ಸಮಾರಂಭದಲ್ಲಿ ಮಾತನಾಡುವಷ್ಟು ನಾನು ಇನ್ನು ಪಕ್ವವಾಗಿಲ್ಲ, ಮಕ್ಕಳ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹ ಮಾಡುತ್ತಿರುವುದು ಹಾಗೂ ಸಮಾಜದಲ್ಲಿ ಉತ್ತಮವಾದ ಸಾಧನೆಯನ್ನು ಮಾಡಿದವರನ್ನು ಗುರುತಿಸಿ ಸನ್ಮಾನ ಮಾಡುತ್ತಿರುವುದು ಉತ್ತಮವಾದ ಕೆಲಸವಾಗಿದೆ.

ಶಿವಶಿಂಪಿ ಸಮಾಜ ಎಂದರೆ ಕಾಯಕ ಸಮಾಜವಾಗಿದೆ. ಇವರು ತಮಗೆ ಒಪ್ಪಿಸಿದ ಕಾಯಕವನ್ನು ಮಾಡುವಲ್ಲಿ ನಿಷ್ಠೆಯನ್ನು ತೆ–ೂೀರುತ್ತಾರೆ. ಇವರ ಕಾಯಕದಿಂದಲೇ ಪ್ರಸಿದ್ದಿಯನ್ನು ಪಡೆದಿದ್ದಾರೆ ಸಮಾಜದವರು ಎಲ್ಲರೊಂದಿಗೆ ಬೇರತು ಹೊಂದಿಕೊಂಡು ಹೋಗುವಂತ ಸಮಾಜದವರಾಗಿದ್ದಾರೆ ಎಂದರು.

ಶಿವಶಿಂಪಿ ಸಮಾಜಕ್ಕೆ ಸರ್ಕಾರದಿಂದ ಯಾವ ರೀತಿಯ ಸೌಲಭ್ಯಗಳು ಇದೆ ಎಂದು ನೋಡಿ ದೊರಕಿಸಲು ಶ್ರಮಿಸುತ್ತೇನೆ.

ಚಲನಚಿತ್ರ ನಟ ದೊಡ್ಡಣ್ಣ ಮಾತನಾಡಿ ಪ್ರತಿಭಾ ಪುರಸ್ಕಾರ ಮತ್ತು ಸಾಧಕರಿಗೆ ಸನ್ಮಾನ ಕಾರ್ಯಕ್ರಮ ತುಂಬಾ ಉತ್ತಮವಾಗಿದೆ. ವಿದ್ಯಾರ್ಥಿಗಳನ್ನು ಗುರುತಿಸಿ ಪ್ರೋತ್ಸಾಹಿಸುವುದು ಸಾಧಕರನ್ನು ಗುರುತಿಸಿ ಸನ್ಮಾನಿಸುವುದು ಒಳ್ಳೆಯ ಕೆಲಸವಾಗಿದೆ. ಇದರಿಂದ ಇಬ್ಬರಿಗೂ ಸಹಾ ಪ್ರೋತ್ಸಾಹ ಸಿಗಲಿದೆ ಎಂದರು. ಕನ್ನಡ ಭಾಷೆ



ನಮ್ಮ ಮಾತೃ ಭಾಷೆಯಾಗಿದೆ. ತಮ್ಮ ಮಕ್ಕಳಿಗೆ ಕಲಿಸಿ ಇಂದಿನ ದಿನಮಾನದಲ್ಲಿ ಕೆಲವು ಪೋಷಕರು ಇಂಗ್ಲಿಷ್ ವ್ಯಾಮೋಹಕ್ಕೆ ಬಿದ್ದು ಕನ್ನಡವನ್ನು ಮರೆಯುತ್ತಿದ್ದಾರೆ. ಇದರಿಂದ ನಮಗೆ ಪೆಟ್ಟು ಬೀಳಲಿದೆ. ಇದರಿಂದ ಪೋಷಕರು ತಮ್ಮ ಮಕ್ಕಳಿಗೆ ಕನ್ನಡವನ್ನು ಕಲಿಸಿ ಕನ್ನಡ ಬೆಳೆಸಿ ಎಂದು ಕಿವಿ ಮಾತು ಹೇಳೀದರು.

ಯುವ ಜನತೆ ಸೇರಿದಂತೆ ಎಲ್ಲರಲ್ಲಿಯೂ ಸಹಾ ಮೊಬೈಲ್ ಬಳಕೆ ಹೆಚ್ಚಾಗಿದೆ ಇದರಿಂದ ಯುವ ಜನತೆ ಹಾಳುಗುತ್ತಿದೆ. ಸಾಧ್ಯವಾದಷ್ಟು ಮೊಬೈಲ್ ಬಳಕೆಯನ್ನು ಕಡಿಮೆ ಮಾಡಿ ಅನಿವಾರ್ಯ ಇದ್ದಾಗ ಮಾತ್ರ ಇದನ್ನು ಬಳಸಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ, ಎಸ್ ಎಸ್ ಎಲ್ ಸಿ, ಪಿಯುಸಿ ಮಕ್ಕಳಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಹುಬ್ಬಳ್ಳಿಯ ಅಖಿಲ ಭಾರತ ಲಿಂಗಾಯತ ಶಿವಶಿಂಪಿ ಸಮಾಜದ ಉಪಾಧ್ಯಕ್ಷರಾದ ಡಾ.ಪ್ರಭಾಕರ್ ಶಿವಶಿಂಪಿ, ಶಿವಹಂಪಿಸಮಾಜದ ಹಲವು ಜಿಲ್ಲೆಯ ಅಧ್ಯಕ್ಷರಾದ ಗುರುಬಸಪ್ಪ ಬೂಸ್ನೂರ್, ಸುಭಾಶ್ ಕುಬಸದ್, ಮಹಿಳಾ ಘಟಕದ ಅಧ್ಯಕ್ಷೆ ಅನಿತಾ ಮುರುಗೇಶ್ , ಸ್ಮಿತಾ ಅನಿಲ್ ಕುಮಾರ್ ನಾಯ್ಕ್ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಮಿಷನ್ ಇಂದ್ರಧನುಷ್ ಜಿಲ್ಲಾ ಉಸ್ತುವಾರಿ ಸಚಿವರಿಂದ ಚಾಲನೆ

**ದಾವಣಗೆರೆ :** ತೀವ್ರಗೊಂಡ ಮಿಷನ್ ಇಂದ್ರಧನುಷ್ 5.0 ಅಭಿಯಾನಕ್ಕೆ ಗಣಿ ಮತ್ತು ಭೂ ವಿಜ್ಞಾನ, ತೆ–ೂೀಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಅವರು ಅವರ ಗೃಹ ಕಚೇರಿಯಲ್ಲಿ ಸೋಮವಾರ ಲಸಿಕೆ ಹಾಕುವ ಮೂಲಕ ಚಾಲನೆ ನೀಡಿದರು.

ಮಿಷನ್ ಇಂದ್ರಧನುಷ್ ಲಸಿಕೆಯನ್ನು ಆಗಸ್ಟ್ 12 ರವರೆಗೆ ಜಿಲ್ಲೆಯ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ, ಅಂಗನವಾಡಿ ಕೇಂದ್ರಗಳಲ್ಲಿ ಹಾಕಲಾಗುತ್ತದೆ. ಗರ್ಭಧಾರಣೆ ಸಮಯದಿಂದ ಮಗು ಹುಟ್ಟಿದಾಗ ಮತ್ತು ನಂತರದಲ್ಲಿ ಮಗುವಿಗೆ ಸಿಗಬೇಕಾದ ಲಸಿಕೆ ಸಿಗದಿದ್ದಲ್ಲಿ ಅಂತಹ 5 ವರ್ಷದೊಳಗಿನ ಮಗುವಿಗೆ ಇಂದ್ರಧನುಷ್ ಲಸಿಕೆ ಹಾಕಲಾಗುತ್ತದೆ.

ಜಿಲ್ಲೆಯಲ್ಲಿ ಇಂದ್ರಧನುಷ್ ಲಸಿಕೆ ಹಾಕಲು 710 ಗರ್ಭಿಣಿ ಫಲಾನುಭವಿಗಳನ್ನು ಮತ್ತು 2 ವರ್ಷದ ವರೆಗಿನ 3154 ಮಕ್ಕಳು ಮತ್ತು 2 ರಿಂದ 5 ವರ್ಷದ 170 ಮಕ್ಕಳನ್ನು ಗುರುತಿಸಲಾಗಿದೆ. ಆಗಸ್ಟ್ 12 ರ ವರೆಗೆ ಪ್ರಾಥಮಿಕ ಆರೋಗ್ಯ ಕೇಂದ್ರ, ಅಂಗನವಾಡಿ ಕೇಂದ್ರಗಳಲ್ಲಿ ಲಸಿಕೆ ಹಾಕಲಾಗುತ್ತದೆ. ಯಾರು ಲಸಿಕೆಗಳಿಂದ ಹೊರಗಿದ್ದಾರೆ, ಅವರು ಕಡ್ಡಾಯವಾಗಿ ಇಂದ್ರಧನುಷ್ ಲಸಿಕೆ ಹಾಕಿಸಿಕೊಳ್ಳಬೇಕೆಂದು ಜಿಲ್ಲಾ ಆರ್.ಸಿ.ಹೆಚ್.ಅಧಿಕಾರಿ ಡಾ; ಮೀನಾಕ್ಷಿಯವರು ಇದೇ ಸಂದರ್ಭದಲ್ಲಿ ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ; ನಾಗರಾಜ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ವಾಸಂತಿ ಉಪ್ಪಾರ್, ಕುಟುಂಬ ಕಲ್ಯಾಣಾಧಿಕಾರಿ ಡಾ; ರೇಣುಕರಾಧ್ಯ ಹಾಗೂ ಕಾರ್ಯಕ್ರಮ ಅಧಿಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳು, ಆಶಾ, ಅಂಗನವಾಡಿ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

### ಕ್ವಿಟ್ ಇಂಡಿಯಾ ಚಳುವಳಿ ಒಂದು ನೆನಪು

**ದಾವಣಗೆರೆ :** ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮಹಾನಗರ ಪಾಲಿಕೆ, ಎನ್.ಸಿ.ಸಿ.33 ಕರ್ನಾಟಕ ಬೆಟಾಲಿಯನ್, ಎನ್.ಎಸ್.ಎಸ್.ಘಟಕ ದಾವಣಗೆರೆ ಹಾಗೂ ಗ್ರಾಮ ಸ್ವರಾಜ್ ಅಭಿಯಾನದ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 8 ರಂದು ಬೆಳಗ್ಗೆ 11 ಗಂಟೆಗೆ ರಾಮನಗರದಲ್ಲಿನ ಗಾಂಧೀ ಭವನದಲ್ಲಿ ಆಜಾದಿ ಕಾ ಅಮೃತ ಮಹೋತ್ಸವದ ಅಂಗವಾಗಿ ಕ್ವಿಟ್ ಇಂಡಿಯಾ ಚಳುವಳಿ ಒಂದು ನೆನಪು ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಕಾರ್ಯಕ್ರಮವನ್ನು ಗಣಿ ಮತ್ತು ಭೂ ವಿಜ್ಞಾನ, ತೆ–ೂೀಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ; ಜಿ.ಎಂ.ಸಿದ್ದೇಶ್ವರ, ಶಾಸಕರಾದ ಡಾ; ಶಾಮನೂರು ಶಿವಶಂಕರಪ್ಪ, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಮಹಾನಗರ ಪಾಲಿಕೆ ಮೇಯರ್ ವಿನಾಯಕ ಜಿ.ಹೆಚ್, ದಾವಣಗೆರೆ ವಿ.ವಿ. ಉಪ ಕುಲಪತಿಗಳಾದ ಪ್ರೊ; ಬಿ.ಡಿ.ಕುಂಬಾರ, ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್, ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ; ಅರುಣ್.ಕೆ, ಪಾಲಿಕೆ ಸದಸ್ಯರಾದ ನಾಗರಾಜ್, ಪಾಲಿಕೆ ಆಯುಕ್ತರಾದ ರೇಣುಕಾ, ಎನ್.ಎಸ್.ಎಸ್.ವಿಭಾಗೀಯ ಅಧಿಕಾರಿ ಪ್ರದೀಪ್ ಬಿ.ವಿ, ಎನ್.ಸಿ.ಸಿ.ಲೆಫ್ಟಿನೆಂಟೆ ಕರ್ನಲ್ ರಾಜೀವ್ ಕುಮಾರ್, ಗ್ರಾಮ ಸ್ವರಾಜ್ ಅಭಿಯಾನದ ಆವರಗೆರೆ ರುದ್ರಮುನಿ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ;ಮಂಜಣ್ಣ ಉಪನ್ಯಾಸ ನೀಡುವರು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಧನಂಜಯ ತಿಳಿಸಿದ್ದಾರೆ.

# ಪ್ರಣಾಳಿಕೆಯಂತೆ ಐದು ಗ್ಯಾರಂಟಿಗಳು ಖಚಿತ : ಸಚಿವ ಎಸ್.ಎಸ್.ಮಲ್ಲಿಕಾರ್ಜುನ್



ದಾವಣಗೆರೆ :ಚುನಾವಣೆಯಲ್ಲಿ ನೀಡಲಾದ ಪ್ರಣಾಳಿಕೆಯಂತೆ 5 ಗ್ಯಾರೆಂಟಿಗಳಲ್ಲಿ 3 ಅನುಷ್ಠಾನ ಮಾಡಿದ್ದು ಆಗಸ್ಟ್ 15 ರಂದು ಗೃಹಲಕ್ಷ್ಮಿಗೆ ಚಾಲನೆ ನೀಡಲಿದೆ. ಅಭಿವೃದ್ಧಿ ಸಹ ಕೆಲಸಗಳು ನಡೆಯಲಿವೆ ಎಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ತಿಳಿಸಿದರು.

ಆಗಸ್ಟ್ 6 ನಗರದ ಹದಡಿ ರಸ್ತೆಯಲ್ಲಿನ ಶಾಮನೂರು ಶಿವಶಂಕರಪ್ಪ ಪಾರ್ವತಮ್ಮ ಸಮುದಾಯ ಭವನದಲ್ಲಿ ಬೆಸ್ಕಾಂನಿಂದ ಏರ್ಪಡಿಸಲಾದ ಗೃಹಜ್ಯೋತಿ ಯೋಜನೆಗೆ ಬೆಸ್ಕಾಂ ಗ್ರಾಹಕರಿಗೆ ಶೂನ್ಯ ಬಿಲ್ ನೀಡುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಚುನಾವಣಾ ಸಂದರ್ಭದಲ್ಲಿ ಜನರಿಗೆ ನೀಡಲಾದ ಪ್ರಣಾಳಿಕೆಯಲ್ಲಿ ಪ್ರತಿಯೊಬ್ಬರಿಗೂ 200 ಯುನಿಟ್ ಉಚಿತ ವಿದ್ಯುತ್ ಗ್ಯಾರಂಟಿ ಘೋಷಣೆ ಮಾಡಿತ್ತು . ಈ ಗ್ಯಾರಂಟಿಯನ್ನು ಅನುಷ್ಠಾನ ಮಾಡುವುದರ ಜೊತೆ–ಗೆ ಸರ್ಕಾರ ಅಭಿವೃದ್ದಿ ಕೆಲಸಗಳನ್ನು ಕುಂಠಿತವಾಗದಂತೆ ನೋಡಿಕೊಳ್ಳಲಿದ್ದು ಜನರಿಗೆ ಆತಂಕ ಬೇಡ ಎಂದರು.

ಜಿಲ್ಲೆಯಲ್ಲಿ 494304 ವಿದ್ಯುತ್ ಗ್ರಾಹಕರಿದ್ದು ಜುಲೈ 27 ರ ವರೆಗೆ 348260 ಅಂದರೆ ಶೇ 70.45 ರಷ್ಟು ಜನರು ಗೃಹಜ್ಯೋತಿ ಯೋಜನೆಗೆ ನೊಂದಾಯಿಸಿದ್ದಾರೆ. ಈ ಫಲಾನುಭವಿಗಳು ಆಗಸ್ಟ್ 1 ರಿಂದ ಯೋಜನೆ ಲಾಭ ಪಡೆಯಲಿದ್ದು 200 ಯುನಿಟ್ ವರೆಗೆ ಶೂನ್ಯ ಬಿಲ್‌ನ್ನು ಪಡೆಯಲಿದ್ದಾರೆ. ಇದರಲ್ಲಿ ಭಾಗ್ಯಜ್ಯೋತಿ, ಅಮೃತ ಜ್ಯೋತಿ ಹಾಗೂ ಕುಟೀರ ಜ್ಯೋತಿ ಫಲಾನುಭವಿಗಳು ಇದ್ದಾರೆ ಎಂದರು.

ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಮಾತನಾಡಿ ಚುನಾವಣಾ ಸಮಯದಲ್ಲಿ ನೀಡಿದ ಭರವಸೆ ಈಡೇರಿಸದಿದ್ದಲ್ಲಿ ಹಳ್ಳಿಗೆ ಬಿಟ್ಟುಕೊಳ್ಳಬೇಡಿ ಎಂದಿದ್ದೆವು ಅದನ್ನು ಈಡೇರಿಸಲಾಗಿದೆ. 10 ಕೆಜಿ ಅಕ್ಕಿಯಲ್ಲಿ ಐದು ಕೆಜಿಗೆ ಹಣವನ್ನು ಖಾತೆಗೆ ಜಮಾ ಮಾಡಲಾಗುತ್ತಿದೆ ಎಂದರು.

ಜಗಳೂರು ಶಾಸಕರಾದ ಬಿ.ದೇವೇಂದ್ರಪ್ಪನವರು ಮಾತನಾಡಿ ಅನೇಕತೆಯಲ್ಲಿ ಏಕತೆ, ಸಾಮರಸ್ಯದಿಂದಿರಲು ಏಕತೆಯಿಂದಿರಬೇಕೆಂದು ತಿಳಿಸಿ ಕೊಟ್ಟ 5 ಖಚಿತಗಳನ್ನು ಈಡೇರಿಸಲಾಗುತ್ತದೆ ಎಂದರು.

ಈ ಕಾರ್ಯಕ್ರಮದಲ್ಲಿ ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರಾದ ಮಹಂತೇಶ್ ಬೀಳಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪಾಲಿಕೆ ಮೇಯರ್ ವಿನಾಯಕ ಬಿ.ಹೆಚ್, ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ, ಜಿ.ಪಂ.ಸಿಇಓ ಸುರೇಶ್ ಇಟ್ನಾಳ್, ಹೆಚ್ಚುವರಿ ರಕ್ಷಣಾಧಿಕಾರಿ ರಾಮಗೊಂಡ ಬಸರಗಿ ಉಪಸ್ಥಿತರಿದ್ದರು.

# ಡಿಜಿಟಲ್ ಮಾಧ್ಯಮಗಳಿಂದ ಭಾಷೆಯ ಮೇಲೆ : ವವಿ ಕುಲಪತಿ ಪ್ರೊ.ಬಿ.ಕೆ. ರವಿ

**ದಾವಣಗೆರೆ :** ಕನ್ನಡ ನಮ್ಮ ನಾಡಿನ ಅಸ್ಮಿತೆ. ಆದರೆ ಬದಲಾದ ಕಾಲಘಟ್ಟದಲ್ಲಿ ಡಿಜಿಟಲ್ ಮಿಡಿಯಾಗಳ ಭರಾಟೆಯಲ್ಲಿ ಸಿಲುಕಿ ಕನ್ನಡ ನಲುಗುತ್ತಿರುವುದರಿಂದ, ನಮ್ಮ ಭಾಷೆಯ ಉಳಿವಿಗೆ ಜಿಲ್ಲಾ ಮತ್ತು ಸ್ಥಳೀಯ ಪತ್ರಿಕೆಗಳನ್ನು ಉಳಿಸುವ ಹೊಣೆ ಜನರ ಮತ್ತು ಸರ್ಕಾರದ ಮೇಲಿದೆ ಎಂದು ಕೊಪ್ಪಳ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಬಿ.ಕೆ.ರವಿ ಹೇಳಿದರು.

ದಾವಣಗೆರೆ ವಿವಿಯ ಪತ್ರಿಕೋದ್ಯಮ ಮತ್ತು ಸಮೂಹ ಸಂಹನ ಅಧ್ಯಯನ ವಿಭಾಗ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಶಾಖೆಗಳ ಸಹಯೋಗದಲ್ಲಿ ವಿವಿಯ ಎಂಬಿಎ ಸಭಾಂಗಣದಲ್ಲಿ ಏರ್ಪಡಿಸಿದ್ದ ಪತ್ರಿಕಾ ದಿನಾಚರಣೆ ಮತ್ತು 'ಡಿಜಿಟಿಯಲ್ ಯುಗದಲ್ಲಿ ಪತ್ರಕರ್ತರ ಭವಿಷ್ಯ' ಕುರಿತು ಏರ್ಪಡಿಸಿದ್ದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಭಾಷೆಯ ಮೇಲೆ ದಾಳಿ ನಡೆಸುತ್ತಿರುವ ಡಿಜಿಟಲ್ ಮಾಧ್ಯಮಗಳಿಂದ 'ಕನ್ನಡ ಭಾಷೆ'ಯನ್ನು ರಕ್ಷಿಸಲು ಮುದ್ರಣ ಮಾಧ್ಯಮಗಳು ಉಳಿಯಬೇಕಾದ ಅವಶ್ಯಕತೆ ಇದೆ ಅಭಿಪ್ರಾಯಪಟ್ಟರು.

ಕಾಲಕಳೆದಂತೆ ಮಾಧ್ಯಮರಂಗ ಅಪ್ ಗ್ರೇಡ್ ಆಗುತ್ತಿದೆ. ಪತ್ರಕರ್ತರು ಸಹ ಬದಲಾದ ತಂತ್ರಜ್ಞಾನಕ್ಕೆ ತಕ್ಕಂತೆ ಹೊಂದಿಕೊಂಡು ಸೃಜನಶೀಲತೆ ಮೈಗೂಡಿಸಿಕೊಂಡು, ಸಂಯಮ ಕಳೆದುಕೊಳ್ಳದೆ, ಓದುಗರಿಗೆ ನೈಜ ಮಾಹಿತಿ ತಲುಪಿಸಬೇಕು ಎಂದು ಸಲಹೆ ನೀಡಿದರು.

ಪತ್ರಕರ್ತರು ವಾಣಿಜ್ಯೀಕರಣದ ಭರಾಟೆಯಲ್ಲಿ ಸಾಮಾಜಿಕ ಹೊಣೆಗಾರಿಕೆ ಮರೆಯಬಾರದು. ಯಾವುದೇ ಮಾಹಿತಿ ಸಿಕ್ಕಾಗ, ಅದರ ಪೂರ್ವ–ಪರ ತಿಳಿದು ವರದಿ ಮಾಡಬೇಕು ಎಂದು ಸಲಹೆ ನೀಡಿದರು.

ಅನಿಮೇಷನ್ ತಂತ್ರಜ್ಞಾನ ಬಂದಾಗ, ಇನ್ನು ಎಷ್ಟೇ ಡಿಜಿಟಿಯಲ್ ಪ್ಲಾಟ್‌ಫಾರ್ಮ್‌ಗಳು ಬಂದರೂ ಮುದ್ರಣ ಮಾಧ್ಯಮಕ್ಕೆ ಮುಂದಿನ 3–4 ದಶಕಗಳ ಕಾಲ ಉಜ್ವಲ ಭವಿಷ್ಯವಿದೆ. ಯಾರೂ ಆತಂಕಕ್ಕೆ ಒಳಗಾಗಬೇಡಿ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ದಾವಣಗೆರೆ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ಬಿ.ಡಿ. ಕುಂಬಾರ, ಯಾವುದಕ್ಕೂ ಆತುರ ಪಡದೆ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಆರೋಗ್ಯಕರ ಸುದ್ದಿ



ನೀಡಬೇಕು. ವಿದ್ಯುನ್ಮಾನ ಮಾಧ್ಯಮಗಳಲ್ಲಿ ಪ್ರಸಾರವಾಗುವ ಸುದ್ದಿಗಳ ಪರಿಣಾಮ, ಅದೆಷ್ಟೋ ಆತ್ಮಹತ್ಮೆ ಮಾಡಿಕೊಂಡಿದ್ದಾರೆ. ನಮಗೆ ಸಮಾಜ ನಾಶ ಮಾಡುವ ಮಾಧ್ಯಮ ಬೇಡ. ಸುದ್ದಿಯಲ್ಲಿ ಸಮಾಜ ಬೆಳಸುವ ಶಕ್ತಿ ಇರಬೇಕೇ ಹೊರತು, ಒಡೆಯುವ ಅಂಶಗಳು ಇರಬಾರದು ಎಂದರು.

ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಬಿ.ಸಿ. ಲೋಕೇಶ್ ಉಪನ್ಯಾಸ ನೀಡಿದರು. ವಿಭಾಗದ ಮುಖ್ಯಸ್ಥ ಶಿವಕುಮಾರ್ ಕಣಸೋಗಿ ಪ್ರಾಸ್ತಾವಿಕ ಮಾತನಾಡಿದರು. ವಿವಿಯ ಕುಲಸಚಿವರಾದ ಬಿ.ಬಿ. ಸರೋಜಾ, ಡಾ. ಕೆ. ಶಿವಶಂಕರ್, ಜಿಲ್ಲಾ ಕಾನಿಪ ಅಧ್ಯಕ್ಷ ಇ.ಎಂ. ಮಂಜುನಾಥ್, ಪ್ರಧಾನ ಕಾರ್ಯದರ್ಶಿ ಎ. ಫಕೃದ್ದೀನ್, ಚಿತ್ರದುರ್ಗ ಜಿಲ್ಲಾಧ್ಯಕ್ಷ ದಿನೇಶ್ ಗೌಡಗೆರೆ, ಜಿಲ್ಲಾ ವರದಿಗಾರರ ಕೂಟದ ಅಧ್ಯಕ್ಷ ಕೆ. ಏಕಾಂತಪ್ಪ, ಪ್ರಧಾನ ಕಾರ್ಯದರ್ಶಿ ಡಾ. ಸಿ. ವರದರಾಜ್ ಸೇರಿದಂತೆ ಇನ್ನಿತರರಿದ್ದರು.

# ಜನರ ನಂಬಿಕೆಗೆ ಗಳಿಸಿದ ಜೀವವಿಮಾ ನಿಗಮ ಸಂಸ್ಥೆ : ಕೆ.ಪಿ.ಚನ್ನಪ್ಪ

**ಚಳ್ಳಕೆರೆ :** 1956 ರಲ್ಲಿ ಇತರೆ ವಿಮಾ ಸಂಸ್ಥೆಗಳನ್ನು ತನ್ನೊಟ್ಟಿಗೆ ಸೇರಿಸಿಕೊಂಡು ರಾಷ್ಟ್ರೀಕರಣಗೊಂಡ ಭಾರತೀಯ ಜೀವ ವಿಮಾ ಸಾರ್ವಜನಿಕರ ನಂಬಿಕಾರ್ಹ ಸಂಸ್ಥೆಯಾಗಿದೆ ಎಂದು ಎಲ್ಐಸಿ ಶಾಖಾ ವ್ಯವಸ್ಥಾಪಕ ಕೆ.ಪಿ. ಚನ್ನಪ್ಪ ಹೇಳಿದರು.

ನಗರದ ಹೊರವಲಯದಲ್ಲಿ ಮಂಗಳವಾರ ಹಮ್ಮಿ ಕೊಂಡಿದ್ದ ಜೀವ ವಿಮಾ ಪ್ರತಿನಿಧಿಗಳ ಕಾರ್ಯಗಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಸ್ತುತ ವಿಮಾ ಆರ್ಥಿಕ ವ್ಯವಹಾರದಲ್ಲಿನ 23 ಇತರೆ ವಿಮಾ ಕಂಪನಿಗಳು ಶೇ.33ರಷ್ಟು ಮಾತ್ರ ಕಾರ್ಯ ಸಾಧನೆ ಮಾಡಿವೆ. ಆದರೆ, ಎಲ್ಐಸಿ ಸಂಸ್ಥೆ ಶೇ.67 ರಷ್ಟು ಕಾರ್ಯ ವ್ಯಾಪ್ತಿ ಒಳಗೊಂಡಿದೆ. ಜೀವನ ಮತ್ತು ಕುಟುಂಬದ ಭದ್ರತೆ–ಗಾಗಿ ಉಳಿತಾಯ ಹಣ ದ್ವಿಗುಣವಾಗಿಸಿಕೊಳ್ಳುವ ಪಾಲಿಸಿ



ಕುಟುಂಬಗಳ ವಿಂಗಡಣೆಯಿಂದ ಕಾಲಕ್ರಮೇಣ ವೈಯಕ್ತಿಕ ಬದುಕಿನ ಭದ್ರತೆಯ ಕಾಡುತ್ತವೆ. ಇದರಿಂದ ಪಿಂಚಣಿ ಯೋಜನೆ ಮತ್ತು ಆರೋಗ್ಯ ರಕ್ಷಣೆಗೆ ಬೇಡಿಕೆ ಹೆಚ್ಚಲಿದೆ. ಇಂತಹ ದೂರದೃಷ್ಟಿಯ ಚಿಂತನೆ ಇರುವ ಎಲ್ಐಸಿ ಸಂಸ್ಥೆಯಲ್ಲಿ ಜನ ಸಾಮಾನ್ಯರ ಬೇಡಿಕೆಯಂತಹ ಪಾಲಿಸಿಗಳನ್ನು ಮಾರುಕಟ್ಟೆಗೆ ಬಿಡಲಾಗಿದೆ. ಪ್ರತಿನಿಧಿಗಳು ಕುಟುಂಬಗಳ ಆರ್ಥಿಕ ಭದ್ರತೆಗೆ ಪಾಲಿಸಿಗಳ ಯೋಜನೆ ನೀಡುವುದು ಅಗತ್ಯವಿದೆ.

ಯೋಜನೆಗಳ ಬಗ್ಗೆ ಜಾಗೃತಿ ಬೆಳೆಯಬೇಕಿದೆ. ಕುಟುಂಬ ರಕ್ಷಣಾ ಕಾರ್ಯ ಯೋಜನೆಯಲ್ಲಿ ಎಲ್ಐಸಿ ಪ್ರಥಮ ಸ್ಥಾನದಲ್ಲಿದೆ ಎಂದು ಹೇಳಿದರು.

ಶಾಖೆಯ ಎಬಿಎಂ ಬಿ. ಗಜೇಂದ್ರ ಬೆಳಕೆರೆ ಮಾತನಾಡಿ, ಎಲ್ಐಸಿ ಅಭಿವೃದ್ದಿ ಅಧಿಕಾರಿ ಬಿ.ತಿಪ್ಪೇಸ್ವಾಮಿ, ಪ್ರತಿನಿಧಿಗಳಾದ ಸಂಡೂರು ಕೃಷ್ಣಪ್ಪ, ಎಸ್. ಪರಮೇಶ್ವರಪ್ಪ, ಕರ್ಲಕುಂಟೆ ತಿಪ್ಪೇಸ್ವಾಮಿ, ಎಚ್.ಡಿ. ಅಂಬಿಕಾ, ಸಿ.ಬಿ. ಜಯಣ್ಣ, ಆರ್. ಮಹಾಂತೇಶ ಮತ್ತಿತರರು ಇದ್ದರು.

## ಫಾಸ್ಟ್ ನ್ಯೂಸ್

ಮೊದಲ ಪುಟದಿಂದ..

# ಕಾಂಗ್ರೆಸ್ ಜನವಿರೋಧಿ ನೀತಿ ಅನುಸರಿಸುತ್ತಿದೆ : ಜಿ.ಹೆಚ್.ತಿಪ್ಪಾರೆಡ್ಡಿ

ಬಿಜೆಪಿ. ಸರ್ಕಾರ ರಾಜ್ಯದಲ್ಲಿ ಅಧಿಕಾರದಲ್ಲಿದ್ದಾಗ ಒಂದು ಯೂನಿಟ್ ಕರೆಂಟ್‌ಗೆ ಮೂರು ರೂ. ಇತ್ತು. ಈಗ ಏಳು ರೂ.ಗಳಾಗಿದೆ. ಬಡವರ ಕಣ್ಣಿಗೆ ಮಣ್ಣೆರೆಚುವ ಕಾಂಗ್ರೆಸ್ ವಿರುದ್ದ ನಿರಂತರ ಹೋರಾಟವಿರುತ್ತದೆ ಎಂದು ಎಚ್ಚರಿಸಿದರು.

ಬಿಜೆಪಿ.ಜಿಲ್ಲಾಧ್ಯಕ್ಷ ಎ.ಮುರಳಿ ಮಾತನಾಡಿ ಭ್ರಷ್ಠ ಕಾಂಗ್ರೆಸ್ ಸರ್ಕಾರ ವರ್ಗಾವಣೆ ದಂಧೆಯಲ್ಲಿ ತೊಡಗಿದೆ. ಎಸ್ಸಿ ಎಸ್ಟಿ.ಗಳಿಗೆ ಬಳಸಬೇಕಾಗಿರುವ ಹಣವನ್ನು ಬೇರೆ ಉದ್ದೇಶಕ್ಕೆ ಉಪಯೋಗಿಸುತ್ತಿದೆ. ಇಂತಹ ನೀಚ ಸರ್ಕಾರದ ವಿರುದ್ದ ನಮ್ಮ ಹೋರಾಟ ಸದಾ ಇರುತ್ತದೆ ಎಂದು ಹೇಳಿದರು.

ಬಿಜೆಪಿ ರೈತ ಮೋರ್ಚಾ ಜಿಲ್ಲಾಧ್ಯಕ್ಷ ವೆಂಕಟೇಶ್‌ಯಾದವ್ ಮಾತನಾಡಿ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗ ರೈತರು ಬೆಳೆದ ಬೆಳೆಯನ್ನು ಎಲ್ಲಿ ಬೇಕಾದರೂ ಮಾರಾಟ ಮಾಡುವ ಅವಕಾಶ ಕಲ್ಪಿಸಿತ್ತು. ಇದರಿಂದ ರೈತರಿಗೆ ಸಾಗಾಣಿಕೆ ವೆಚ್ಚ, ದಲ್ಲಾಳಿಗಳ ಕಮೀಷನ್, ಇತರೆ ವೆಚ್ಚಗಳು ಉಳಿಯುತ್ತಿತ್ತು. ಕಾಂಗ್ರೆಸ್ ಸರ್ಕಾರ ಇದನ್ನು ರದ್ದುಪಡಿಸಿ ಅನ್ನದಾತ ರೈತನ ಕತ್ತು ಹಿಸುಕಲು ಹೊರಟಿದೆ. ಹನ್ನೊಂದು ಲಕ್ಷ ರೈತ ಕುಟುಂಬಗಳ ವಿದ್ಯಾರ್ಥಿಗಳಿಗೆ ಪ್ರತಿ ವರ್ಷ 438.69 ಕೋಟಿ ರೂ.ಗಳ ರೈತ ವಿದ್ಯಾನಿಧಿ ರದ್ದುಪಡಿಸಿ ರೈತ ವಿರೋಧಿ ಎನ್ನುವುದನ್ನು ಸಾಬೀತುಪಡಿಸಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಪ್ರತಿಭಟನೆಯಲ್ಲಿ ಜೈಪಾಲ್, ನರೇಂದ್ರ ಹೊನ್ನಾಳ್, ಮಲ್ಲಿಕಾರ್ಜುನ್, ಸಂಪತ್, ಚಂದ್ರಿಕ ಲೋಕನಾಥ್, ರೇಖ, ಬಸಮ್ಮ, ನಂದಿ ನಾಗರಾಜ್, ನಾಗರಾಜ್‌ಬೇದ್ರೆ, ನಗರಾಧ್ಯಕ್ಷ ನವೀನ್ ಚಾಲುಕ್ಯ, ರೂಪ,

ಸೂರೇನಹಳ್ಳಿ ವಿಜಯಣ್ಣ, ಸುರೇಶ್, ಕರಿಬಸಪ್ಪ, ಲೋಕೇಶ್, ರಂಗಸ್ವಾಮಿ, ಗುರುಮೂರ್ತಿ, ಕುಮಾರಸ್ವಾಮಿ, ನಾಗರಾಜ್, ಆನಂದ್, ಲೀಕಾ ಶಶಿಧರ್, ಅರುಣ ಕುಮಾರಿ, ಬೋಜರಾಜ್, ನಗರಸಭೆ ಸದಸ್ಯರುಗಳಾದ ಹರೀಶ್, ಸುರೇಶ್, ಶ್ರೀನಿವಾಸ್ ಮುಂತಾದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಮಲೆಬೆನ್ನೂರು ಪಟ್ಟಣ ನಿವಾಸಿಗಳಿಂದ ಅರ್ಜಿ ಆಹ್ವಾನ

**ದಾವಣಗೆರೆ :** ಮಲೆಬೆನ್ನೂರು ಪುರಸಭೆ ವ್ಯಾಪ್ತಿಯಲ್ಲಿ 2021-22ನೇ ಸಾಲಿನ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯಡಿ ಮಂಜೂರಾದ ಮೊತ್ತದಲ್ಲಿ ವಿವಿಧ ಸೌಲಭ್ಯಗಳನ್ನು ಪಡೆಯಲು ಮಲೆಬೆನ್ನೂರು ಪಟ್ಟಣ ನಿವಾಸಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಫಲಾನುಭವಿಗಳು ಆಗಸ್ಟ್ 11 ರೊಳಗೆ ಕಚೇರಿಯಿಂದ ಅರ್ಜಿ ಪಡೆದು ಆಧಾರ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣಪತ್ರ, ಬ್ಯಾಂಕ್ ಪಾಸ್‌ಬುಕ್, ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಹಾಗೂ ವಿದ್ಯಾರ್ಥಿಗಳಾಗಿದ್ದಲ್ಲಿ 2020-21 ಮತ್ತು 2021-22ನೇ ಸಾಲಿನಲ್ಲಿ ಉತ್ತೀರ್ಣರಾದ ಬಗ್ಗೆ ದೃಢೀಕೃತ ಅಂಕಪಟ್ಟಿಯೊಂದಿಗೆ ಸೆಪ್ಟಂಬರ್ 4 ರೊಳಗಾಗಿ ಸಲ್ಲಿಸಬೇಕು ಎಂದು ಮಲೆಬೆನ್ನೂರು ಪುರಸಭೆ ಮುಖ್ಯಾಧಿಕಾರಿ ಸುರೇಶ್.ಎ ತಿಳಿಸಿದ್ದಾರೆ.

## ಉಚಿತ ಲಸಿಕೆ, ಖಚಿತ ಆರೋಗ್ಯ : ಡಾ. ಚಂದ್ರಮೋಹನ

**ದಾವಣಗೆರೆ :** ಹರಿಹರ ತಾಲ್ಲೂಕಿನಲ್ಲಿ ಆಗಸ್ಟ್ 12 ರವರೆಗೆ ಮಿಷನ್ ಇಂದ್ರಧನುಷ್ 5.0 ಅಭಿಯಾನದ ಮೊದಲ ಹಂತ ನಡೆಯಲಿದ್ದು, ಉಚಿತ ಲಸಿಕೆಯನ್ನು ಹಾಕಿಸಿಕೊಂಡು ಖಚಿತ ಆರೋಗ್ಯ ರಕ್ಷಣೆ ಪಡೆದುಕೊಳ್ಳಿ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಚಂದ್ರಮೋಹನ ತಿಳಿಸಿದರು.

ಹರಿಹರ ತಾಲ್ಲೂಕಿನ ಬೆಳ್ಳೂಡಿಯ ಶಂಷಿಪುರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಆಗಸ್ಟ್ 7 ರಂದು ಮಿಷನ್ ಇಂದ್ರಧನುಷ್ 5.0 ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಉಪ ಕೇಂದ್ರಗಳು, ಅಂಗನವಾಡಿ ಕೇಂದ್ರಗಳು ಮತ್ತು ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಇಂದಿನಿಂದ ಆಗಸ್ಟ್ 12 ರವರೆಗೆ ಬೆಳಿಗ್ಗೆ 9 ರಿಂದ ಸಂಜೆ 4 ರವರೆಗೆ ಮಿಷನ್ ಇಂದ್ರಧನುಷ್ 5.0 ಅಭಿಯಾನ ಕಾರ್ಯಕ್ರಮ ನಡೆಯಲಿದ್ದು, ರೋಟಾ. ದಡಾರ-ರುಬೆಲ್ಲಾ, ಡಿಪಿಟಿ ಬೂಸ್ಟರ್ ಜೊತೆಗೆ ಓಪಿವಿ ಮತ್ತು ಓಪಿವಿ ಬೂಸ್ಟರ್ ಡೋಸ್‌ಗಳಿಂದ ತಪ್ಪಿಸಿಕೊಂಡವರು ಲಸಿಕೆಯನ್ನು ತಪ್ಪದೇ ಹಾಕಿಸಿಕೊಳ್ಳಿ ಇದರಿಂದ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಲು ಸಾಧ್ಯವಾಗುತ್ತದೆ ಎಂದರು.

ತಾಲ್ಲೂಕು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಉಮಣ್ಣ ಮಾತನಾಡಿ ತೀವ್ರ ತರವಾದ ಮಿಷನ್ ಇಂದ್ರಧನುಷ್ ಕಾರ್ಯಕ್ರಮವು ನಾಲ್ಕು ವರ್ಷಗಳನ್ನು ಸಂಪೂರ್ಣವಾಗಿಸಿ, ಐದನೇ ವರ್ಷದಲ್ಲಿ ಪ್ರಾರಂಭವಾಗಿದೆ ಇದನ್ನು ಸದುಪಯೋಗಪಡಿಸಿಕೊಳ್ಳಬೇಕು, 5 ವರ್ಷದೊಳಗಿನ ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಿ ಆರೋಗ್ಯವಂತ ಮಕ್ಕಳನ್ನಾಗಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಹೇಳಿದರು.

ಆಡಳಿತ ವೈದ್ಯಾಧಿಕಾರಿಗಳಾದ ಡಾ. ಶಿಲ್ಪ ಮಾತನಾಡಿ ಗರ್ಭಿಣಿ ಮಹಿಳೆಯರಿಗೆ ತಮ್ಮ ಸುರಕ್ಷತೆ ಮತ್ತು ಮಗುವಿನ ಆರೈಕೆ ಬಗ್ಗೆ ತಾಯಿ ಕಾರ್ಡ್‌ನಲ್ಲಿ ಸಂಪೂರ್ಣವಾದ ಮಾಹಿತಿ ಲಭ್ಯವಿರುತ್ತದೆ. ಗರ್ಭಿಣಿ ಅವಧಿಯಲ್ಲಿ ಟಿ.ಟಿ ಲಸಿಕೆ ಕಬ್ಬಿಣಾಂಶದ ಮತ್ತು ಕ್ಯಾಲ್ಸಿಯಂ ಮಾತ್ರೆಗಳನ್ನು ಸೇವಿಸಬೇಕು ಎಂದು ಗರ್ಭಿಣಿಯರಿಗೆ ಮತ್ತು ತಾಯಂದಿರಿಗೆ ಮಾಹಿತಿ ನೀಡಿದರು

ಗ್ರಾಮ ಪಂಚಾಯತಿ ಅಧ್ಯಕ್ಷರಾದ ಮೀನಾಕ್ಷಮ್ಮ. ತಾಲ್ಲೂಕು ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಯಾದ ಶ್ರೀಮತಿ ಸುಧಾ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ಶ್ರೀಮತಿ ಭಾನುಮತಿ, ಸಿ.ಹೆಚ್.ಓ ಪ್ರತಿಭಾ. ಆರೋಗ್ಯ ಶಿಕ್ಷಣಾಧಿಕಾರಿ ನಾಗರಾಜ್ ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ಆರೋಗ್ಯಕರ ಮಕ್ಕಳು ಹಾಗೂ ಸದೃಢ ಸಮಾಜಕ್ಕೆ ಸಹಕರಿಸಿ : ಡಿಸಿ ದಿವ್ಯ ಪ್ರಭು



**ಚಿತ್ರದುರ್ಗ :** ಲಸಿಕೆಯಿಂದ ವಂಚಿತರಾಗಿರುವ, ಲಸಿಕೆ ಪಡೆಯದ ಹಾಗೂ ಕಾರಣಾಂತರಗಳಿಂದ ಲಸಿಕೆಯಿಂದ ಬಿಟ್ಟುಹೋದ ಮಕ್ಕಳನ್ನು ಹಾಗೂ ಗರ್ಭಿಣಿಯರನ್ನು ಸಮೀಕ್ಷೆ ಮೂಲಕ ಗುರುತಿಸಿ, ಅವರಿಗೆ ಪರಿಣಾಮಕಾರಿ ಇಂದ್ರಧನುಷ್ ಲಸಿಕಾ ಅಭಿಯಾನ-5.0 ಮೂರು ಹಂತಗಳಲ್ಲಿ ಏರ್ಪಡಿಸಲಾಗಿದ್ದು ಲಸಿಕೆ ಪಡೆಯುವ ಮೂಲಕ ಆರೋಗ್ಯಕರ ಮಕ್ಕಳು ಮತ್ತು ಸದೃಢ ಸಮಾಜ ನಿರ್ಮಾಣ ಮಾಡಲು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿಆರ್ ಜೆ ಹೇಳಿದರು.

ಬುದ್ಧನಗರದ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ಮಿಷನ್ ಇಂದ್ರಧನುಷ್ 5.0 ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಇಂದ್ರಧನುಷ್ ಅಭಿಯಾನ-5.0 ಮೂರು ಹಂತಗಳಲ್ಲಿ ಏರ್ಪಡಿಸಲಾಗಿದ್ದು, ಮೊದಲ ಹಂತದ ಲಸಿಕಾ ಕಾರ್ಯಕ್ರಮ ಆ. 07 ರಿಂದ 12 ರವರೆಗೆ ಜರುಗಲಿದೆ. ಎಲ್ಲಾ ತಾಯಂದಿರು ಅಂಗನವಾಡಿ ಕೇಂದ್ರ, ಆರೋಗ್ಯ ಕೇಂದ್ರಗಳಲ್ಲಿನ ಲಸಿಕಾ ಕೇಂದ್ರಗಳಿಗೆ ಮಕ್ಕಳನ್ನು ಕರೆತಂದು ಲಸಿಕೆಯನ್ನು ಪಡೆದು ಮಕ್ಕಳ ರೋಗ ನಿರೋಧಕ ಶಕ್ತಿ ವೃದ್ಧಿಗೆ ಸಹಕರಿಸಬೇಕು, 5 ವರ್ಷದವರೆಗೆ ಮಗುವಿಗೆ ಕಾಲ ಕಾಲಕ್ಕೆ ಲಸಿಕೆಯನ್ನು ಹಾಕಿಸಬೇಕು, ಮಾರಕ ರೋಗಗಳನ್ನು ತಡೆಗಟ್ಟಲು ಲಸಿಕೆಗಳು ತುಂಬಾ ಅವಶ್ಯಕವಾಗಿರುವುದರಿಂದ ಲಸಿಕೆಯನ್ನು ತಪ್ಪದೆ ಹಾಕಿಸಬೇಕು ಎಂದು ಹೇಳಿದರು.

ಆಶಾ ಕಾರ್ಯಕರ್ತೆಯರು ಮನೆ ಮನೆಗೆ ತೆರಳಿ ಸರ್ವೆ ಮಾಡಿದ್ದು ಇದರಲ್ಲಿ ವಿವಿಧ ಲಸಿಕೆಗಳಿಂದ ಹೊರಗುಳಿದ ಗರ್ಭಿಣಿಯರ ಸಂಖ್ಯೆ 900, 2 ವರ್ಷದೊಳಗಿನ ಮಕ್ಕಳ ಸಂಖ್ಯೆ 3418, 2 ರಿಂದ 5 ವರ್ಷದ ಮಕ್ಕಳ ಸಂಖ್ಯೆ 57 ಕಂಡು ಬಂದಿದ್ದು ಎಲ್ಲಾರಿಗೂ ಲಸಿಕೆ ಹಾಕುವ ಗುರಿ ಇದೆ ಎಂದರು.

ಡಿಹೆಚ್ ಓ ಡಾ.ಆರ್. ರಂಗನಾಥ್ ಮಾತನಾಡಿ ಮನೆ ಮನೆಗೆ ಸಮೀಕ್ಷೆ ಕಾರ್ಯಕ್ರಮವನ್ನು ಈಗಾಗಲೇ ಜಿಲ್ಲಾದ್ಯಂತ ಮಾಡಲಾಗಿದೆ. ಸಮೀಕ್ಷೆಯಲ್ಲಿ ಲಸಿಕೆ ಬಾಕಿ ಇರುವ ಗರ್ಭಿಣಿಯರು ಮತ್ತು 5.0 ವರ್ಷದ ಮಕ್ಕಳನ್ನು ಗುರುತಿಸಿ ಕ್ರಿಯಾ ಯೋಜನೆಯನ್ನು ತಯಾರಿಸಲಾಗಿದೆ. ಐಇಸಿ ಪ್ರಚಾರ ಸಾಮಗ್ರಿಗಳನ್ನು ಜಿಲ್ಲೆಯಿಂದ ವಿತರಿಸಲಾಗಿದೆ. ಮಕ್ಕಳಿಗೆ ಲಸಿಕೆ ನೀಡಿದ ನಂತರ ಮಾಹಿತಿಯನ್ನು ಯು-ವಿನ್ ಪೋರ್ಟಲ್ ನಲ್ಲಿ ಫಲಾನುಭವಿಗಳ ಮಾಹಿತಿ ಎಂಟ್ರಿ ಮಾಡಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ನಗರಸಭೆ ಉಪಾಧ್ಯಕ್ಷೆ ಶ್ರೀದೇವಿ ಚಕ್ರವರ್ತಿ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ. ರೇಣು ಪ್ರಸಾದ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಬಿ.ವಿ ಗಿರೀಶ್, ತಾಲ್ಲೂಕು ನೋಡಲ್ ಅಧಿಕಾರಿ ಸುಧಾ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಮಂಜುನಾಥ್ ಸೇರಿದಂತೆ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಗಳು ಹಾಗೂ ಆಶಾ ಕಾರ್ಯಕರ್ತೆಯರು ಇದ್ದರು.

# ಶಾಗಲೆ ಹಳ್ಳಕ್ಕೆ ನೂತನವಾಗಿ ಬ್ರಿಡ್ಜ್ ಕಂ ಬ್ಯಾರೇಜ್ ಉದ್ಘಾಟನೆ



**ಹೊಳಲ್ಕೆರೆ :** ಯಾವುದೇ ಕಾಮಗಾರಿ ಮಾಡಿದರೂ ಹತ್ತಾರು ವರ್ಷಗಳ ಕಾಲ ಬಾಳಿಕೆ ಬರುವಂತಿರಬೇಕೆನ್ನುವ ಉದ್ದೇಶದಿಂದ ಎರಡು ಕೋಟಿ ರೂ. ವೆಚ್ಚದಲ್ಲಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣವಾಗಿದೆ ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ಹೊಳಲ್ಕೆರೆ ತಾಲ್ಲೂಕಿನ ಹಿರಿಯೂರಿನಿಂದ ಅಂದನೂರಿಗೆ ಹರಿದು ಹೋಗುವ ಶಾಗಲೆ ಹಳ್ಳಕ್ಕೆ ನೂತನವಾಗಿ ನಿರ್ಮಿಸಿರುವ ಬ್ರಿಡ್ಜ್ ಕಂ ಬ್ಯಾರೇಜ್‌ನ್ನು ಭಾನುವಾರ ಉದ್ಘಾಟಿಸಿ ಮಾತನಾಡಿದರು.

ಮಳೆ ನೀರು ವ್ಯರ್ಥವಾಗಿ ಹರಿದು ಹೋಗುವುದನ್ನು ತಡೆಯುವುದಕ್ಕಾಗಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಿಸಿದ್ದರಿಂದ ನೀರು ನದಿಯ ರೀತಿಯಲ್ಲಿ ಹರಿದು ಸುತ್ತಮುತ್ತಲಿನ ಕೊಳವೆಬಾವಿ ನೀರಿನ ಮಟ್ಟ ಹೆಚ್ಚಳವಾಗಿ ರೈತರಿಗೆ ಅನುಕೂಲವಾಗಿದೆ. ಅಧಿಕಾರ ಶಾಶ್ವತವಲ್ಲ. ಇದ್ದಷ್ಟು ದಿನ ಹತ್ತಾರು ಜನ ಮೆಚ್ಚುವ ರೀತಿಯಲ್ಲಿ ಕೆಲಸ ಮಾಡಬೇಕು. ಬದ್ದತೆಯಿರುವ ರಾಜಕಾರಣಿಯಿಂದ ಮಾತ್ರ ಅದು ಸಾಧ್ಯ ಎಂದರು.

ನಾನು ಅಧಿಕಾರವನ್ನು ಎಲ್ಲಿ ದುರುಪಯೋಗ ಪಡಿಸಿಕೊಂಡಿದ್ದೇನೇನೋ ಎಂದು ಮನಸ್ಸು ಹೇಳುತ್ತಿದೆ ಎನ್ನುವ ಭಾವನೆಯಿಟ್ಟುಕೊಂಡು ಕೆಲಸ ಮಾಡಿದ್ದರಿಂದ ಕ್ಷೇತ್ರಾದ್ಯಂತ ಅಭಿವೃದ್ದಿ ಕೈಗೊಳ್ಳಲು ಕಾರಣವಾಯಿತು. ಸಾಸಲು ಸರ್ಕಲ್‌ನಿಂದ ಸಿರಿಗೆರೆಗೆ, ಸಿರಿಗೆರೆಯಿಂದ ಹಿರೆಬೆನ್ನೂರು ಸರ್ಕಲ್‌ವರೆಗೆ ರಸ್ತೆಗೆ ನೂರು ಕೋಟಿ ರೂ.ಗಳನ್ನು ಕೊಟ್ಟಿದ್ದೇನೆಂದು ತಿಳಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಐದು ಉಚಿತ ಗ್ಯಾರೆಂಟಿಗಳನ್ನು ಜನತೆಗೆ ಘೋಷಿಸಿದೆ. ನಾನು ವಿರೋಧ ಪಕ್ಷದಲ್ಲಿದ್ದರು ಸರ್ಕಾರದಿಂದ ಅನುದಾನ ತರುವುದು ಕಷ್ಠವೇನಲ್ಲ. ಯಾವ್ಯಾವ ಇಲಾಖೆಯಲ್ಲಿ ಏನೇನು ಸಿಗುತ್ತದೆ ಎನ್ನುವುದನ್ನು ತಿಳಿದುಕೊಂಡಿದ್ದೇನೆ. ಹಾಗಾಗಿ ಕ್ಷೇತ್ರದ ಅಭಿವೃದ್ದಿಗೆ ಯಾವ ಧಕ್ಕೆಯೂ ಆಗದಂತೆ ನೋಡಿಕೊಳ್ಳುತ್ತೇನೆಂದು ಜನತೆಗೆ ಭರವಸೆ ನೀಡಿದರು.

ಸಾಣೆಹಳ್ಳಿಯ ಡಾ.ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಸಾನಿಧ್ಯ ವಹಿಸಿದ್ದರು.

ಗ್ರಾ.ಪಂ. ಅಧ್ಯಕ್ಷೆ ಸಾಕಮ್ಮ ರಾಜಪ್ಪ, ಲಿಂಗರಾಜ್, ಮಾಲಿಂಗಪ್ಪ, ಬಸವರಾಜ್, ಬಸಯ್ಯ, ಚಂದ್ರಶೇಖರಯ್ಯ, ಪರಮೇಶ್ವರಪ್ಪ, ಚಂದ್ರಣ್ಣ, ಕುಮಾರ್, ಸಣ್ಣ ನೀರಾವರಿ ಇಲಾಖೆ ಇಂಜಿನಿಯರ್ ವೆಂಕಟರಮಣ, ಗುತ್ತಿಗೆದಾರ ಅಜ್ಜಪ್ಪ ಹಾಗೂ ಗ್ರಾಮದ ಹಿರಿಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಜವಾಹರ ನವೋದಯ ವಿದ್ಯಾಲಯ : 6ನೇ ತರಗತಿ ಪ್ರವೇಶಕ್ಕೆ ಅರ್ಜಿ

ಚಿತ್ರದುರ್ಗ : ಹಿರಿಯೂರು ತಾಲ್ಲೂಕಿನ ಉಡುವಳ್ಳಿಯ ಜವಾಹರ್ ನವೋದಯ ವಿದ್ಯಾಲಯಕ್ಕೆ 2024-24ನೇ ಸಾಲಿಗೆ 6ನೇ ತರಗತಿಗೆ ಪ್ರವೇಶ ಪಡೆಯಲು ಜಿಲ್ಲೆಯ ಎಲ್ಲಾ ಸರ್ಕಾರಿ ಹಾಗೂ ಮಾನ್ಯತೆ ಪಡೆದ ಶಾಲೆಗಳ ಮಕ್ಕಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಆಗಸ್ಟ್ 10 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದು.

2024-25 ರ ಅವಧಿಯ ಆಯ್ಕೆ ಪರೀಕ್ಷೆಗಾಗಿ ಆನ್‌ಲೈನ್ ಮೂಲಕ ಜವಾಹರ ನವೋದಯ ವಿದ್ಯಾಲಯದಲ್ಲಿ 6 (ಗಿಖ) ನೇ ತರಗತಿಯ ಪ್ರವೇಶಕ್ಕಾಗಿ ಆನ್ ಲೈನ್ ಅರ್ಜಿಗಳನ್ನು ಆಹ್ವಾನಿಸಲಾಗಿದೆ. 2024ರ ಜನವರಿ 20ರಂದು ಪ್ರವೇಶ ಪರೀಕ್ಷೆ ನಡೆಯಲಿದೆ. **https://cbseitms.rcil.gov.in/nvs/Index/Registration.** ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದು.

ಕೇಂದ್ರ ಸರ್ಕಾರದ ಶಿಕ್ಷಣ ಸಚಿವಾಲಯದಿಂದ ಸ್ಥಾಪಿಸಲ್ಪಟ್ಟ ಸ್ವಯತ್ತ ಶಿಕ್ಷಣ ಸಂಸ್ಥೆ ಅಡಿಯಲ್ಲಿ ದೇಶಾದಾದ್ಯಂತ ಸ್ಥಾಫಿತದವಾದ ಸುಮಾರು 660 ನವೋದಯ ವಿದ್ಯಾಲಯಗಳಲ್ಲಿ 1986 ರಲ್ಲಿ ಸ್ಥಾಪಿತವಾದ ಜವಾಹರ ನವೋದಯ ವಿದ್ಯಾಲಯ ಚಿತ್ರದುರ್ಗ, ನವೋದಯವು ಒಂದು ಉತ್ತಮ ವಸತಿ ವಿದ್ಯಾಲಯವಾಗಿದೆ.

ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲೂಕಿನಿಂದ 08 ಕಿಲೋಮೀಟರ್ ದೂರದ ಉಡುವಳ್ಳಿ ಎಂಬ ಗ್ರಾಮದಲ್ಲಿ 32 ಎಕರೆ ವಿಸ್ತೀರ್ಣವುಳ್ಳ ಸುಂದರ ಹಸಿರು ಪ್ರಕೃತಿಯ ವಾತವರಣದ ಮಧ್ಯೆ ಕಂಗೊಳಿಸುತ್ತಿರುವ ವಸತಿ ವಿದ್ಯಾಲಯದಲ್ಲಿ ಆಯ್ಕೆಯಾದ ಎಲ್ಲಾ ವಿದ್ಯಾರ್ಥಿಗಳಿಗೂ ಉಚಿತ ವಿದ್ಯಾಭ್ಯಾಸ ಮತ್ತು ಉಚಿತ ವಸತಿ ಸೌಲಭ್ಯವನ್ನು ನೀಡಲಾಗುತ್ತಿದೆ.

ಜವಾಹರ ನವೋದಯ ವಿದ್ಯಾಲಯವು ಸಿ.ಬಿ.ಎಸ್.ಇಯ ಮಾರ್ಗದರ್ಶನದ ಅಡಿಯಲ್ಲಿ ನಡೆಯುತ್ತಿದೆ. 6 ರಿಂದ 12ನೇ ತರಗತಿಯವರೆಗೆ ಗುಣಾತ್ಮಕ ಶಿಕ್ಷಣ ನೀಡುವ ವಿದ್ಯಾಲಯವಾಗಿದೆ.11 ಮತ್ತು 12 ನೆಯ ತರಗತಿಯು ವಿಜ್ಞಾನ ವಿಭಾಗವನ್ನು ಹೊಂದಿದೆ.

ಅರ್ಜಿ ಸಲ್ಲಿಸಲು ಯಾವುದೇ ಸಮಸ್ಯೆ ಇದ್ದಲ್ಲಿ ಉಪನ್ಯಾಸಕ ಅಂಟೋನಿ ಸ್ಟೆಲ್ಲಿ ? 9740133395, ದ್ವಿತೀಯ ದರ್ಜೆ ಸಹಾಯಕಿ ರೂಪಾ -8310337524 ಅವರನ್ನು ಸಂಪರ್ಕಿಸಬಹದು.

# ಸಾಮೂಹಿಕ 'ಬರಿಹೊಟ್ಟೆ ಸತ್ಯಾಗ್ರಹ' ಹೋರಟ : ಕುಮಾರ್ ಸಮತಳ




**ಚಿತ್ರದುರ್ಗ :** ಬಗರ್ ಹುಕುಂ ಸಾಗುವಳಿ ಭೂಮಿಯ ಮಂಜೂರಾತಿಗಾಗಿ ಅರ್ಜಿ ಸಲ್ಲಿದವರಿಗೆ ಮತ್ತು ಅರಣ್ಯ ಹಕ್ಕು ಕಾಯ್ದೆಯಡಿ ಅರ್ಜಿ ಸಲ್ಲಿಸಿರುವ ಆದಿವಾಸಿ ಬುಡಕಟ್ಟು ಜನರಿಗೆ ಹಾಗೂ ಪಾರಂಪರಿಕ ಅರಣ್ಯ ಹಕ್ಕುದಾರರಿಗೆ ಭೂಮಿಯ ಹಕ್ಕುಪತ್ರಗಳನ್ನೂ, ಮನೆಗಳಿಗಾಗಿ ಅರ್ಜಿ ಸಲ್ಲಿಸಿರುವವರಿಗೆ, ಹಾಗೂ ರಾಜ್ಯದಾದ್ಯಂತದ ಸ್ಲಂ ನಿವಾಸಿಗಳಿಗೆ ಮನೆಗಳ ಹಕ್ಕುಪತ್ರಗಳನ್ನೂ ನೀಡಬೇಕು ಎಂಬ ಹಕ್ಕೊತ್ತಾಯವನ್ನು ಮುಂದಿಟ್ಟು, ಸ್ವಾತಂತ್ರ್ಯ ದಿನಾಚರಣೆಯ ಮುಂಚಿನ ದಿನವಾದ ಆಗಸ್ಟ್ 14 ರಂದು ಸಾಮೂಹಿಕ 'ಬರಿಹೊಟ್ಟೆ ಸತ್ಯಾಗ್ರಹ'ವನ್ನು ಹಮ್ಮಿಕೊಳ್ಳಲಾಗಿದೆ ಎಂದು ಭೂಮಿ ವಸತಿ ಹಕ್ಕು ವಂಚಿತರ ಹೋರಾಟ ಸಮಿತಿಯ ಕಾರ್ಯದರ್ಶಿ ಕುಮಾರ್ ಸಮತಳ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಅಧಿಕಾರಕ್ಕೆ ಬದಿರುವ ಕಾಂಗ್ರೆಸ್ ಸರ್ಕಾರ ಬಡ ಜನರಿಗೆ ನೀಡಿರುವ ಐದು ಗ್ಯಾರಂಟಿಗಳ ನೀಡುವ ಬದಲು ಸ್ವಾವಲಂಬಿ ಬದುಕಿನ ಗ್ಯಾರಂಟಿ ನೀಡಲು ಆಗ್ರಹಿಸಿದರು. ದಶಕಗಳಿಂದ ಹಕ್ಕುಪತ್ರಗಳಿಗಾಗಿ ಕಾದಿರುವ ಈ ನಾಲ್ಕೂ ಬಗೆಯ ಒಟ್ಟು ಸುಮಾರು 60ರಿಂದ 70 ಲಕ್ಷದಷ್ಟು ಸಂಖ್ಯೆಯ ಅರ್ಜಿಗಳು ಬಾಕಿಯಿದೆ. ಮುಖ್ಯಮಂತ್ರಿಗಳ ನೇತೃತ್ವದಲ್ಲಿ, ಕಂದಾಯ, ಅರಣ್ಯ, ವಸತಿ ಹಾಗೂ ಗ್ರಾಮೀಣಾಭಿವೃದ್ಧಿ ಮಂತ್ರಿಗಳು ಮತ್ತು ಹೋರಾಟದ ಪ್ರತಿನಿಧಿಗಳು ಇರುವಂತೆ ಶೀಘ್ರವೇ 'ಉನ್ನತ ಮಟ್ಟದ ಸಭೆ' ಕರೆಯಬೇಕು. ಭೂಮಿ, ಮನೆ ಮತ್ತು ನಿವೇಶನಗಳ ಮಂಜೂರಾತಿಯನ್ನು ಯುದ್ಧೋಪಾದಿಯಲ್ಲಿ ಕೈಗೆತ್ತಿಕೊಳ್ಳಬೇಕು. ಕಾಲಮಿತಿಯೊಳಗೆ ಇದನ್ನು ಜಾರಿಗೊಳಿಸಲಿಕ್ಕಾಗಿ 'ಹೈ ಪವರ್ ಕಮಿಟಿ'ಯನ್ನು ರಚಿಸಬೇಕು ಎಂದರು. ಹಿಂದಿನಂತೆ ಇದರಲ್ಲಿ ಹೋರಾಟದ ಪ್ರತಿನಿಧಿಗಳೂ ಇರಬೇಕು. ಸಂಬಂಧಪಟ್ಟ ವಿವಿಧ ಇಲಾಖೆಗಳ ನಡುವೆ ಉನ್ನತ ಮಟ್ಟದಲ್ಲಿ ಸಮನ್ವಯವನ್ನು ಸುಲಲಿತಗೊಳಿಸಲು ಈ ಕಮಿಟಿ ಒಬ್ಬರು ಸಂಪುಟ ದರ್ಜೆ ಮಂತ್ರಿಗಳ ನೇತೃತ್ವದಲ್ಲಿ ಕಾರ್ಯ ನಿರ್ವಹಿಸಬೇಕು. ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲೂ ಭೂ ಮಂಜೂರಾತಿ ಸಮಿತಿಗಳನ್ನು ಕೂಡಲೇ ರಚಿಸಬೇಕು. ಈ ಸಮಿತಿಗಳಲ್ಲಿ ಭೂಮಿ-ವಸತಿ ಹೋರಾಟದ ಒಬ್ಬ ಪ್ರತಿನಿಧಿ ಕೂಡ ಇರಬೇಕು ಎಂದು ಆಗ್ರಹಿಸಿದರು.

ಇದ್ದ ಭೂಮಿಯನ್ನು ಮಠ ಮಾನ್ಯಗಳಿಗೆ, ಕಂಪನಿಗಳಿಗೆ ಹಾಗೂ ಬಲಾಢ್ಯ ಪ್ಲಾಂಟರುಗಳಿಗೆ ಪರಭಾರೆ ಮಾಡಿಕೊಂಡಿದ್ದು ಮಾತ್ರ. ಬಡಜನರಿಗೆ ಯಾವ ಹಕ್ಕೂ ದಕ್ಕಲಿಲ್ಲ. ತಮ್ಮ ಸರ್ಕಾರ ಅಧಿಕಾರಕ್ಕೆ ಬಂದಿದೆ. ಸರ್ಕಾರದ ಗಮನ ಸೆಳೆಯಲು ಮತ್ತು ಈ ಮಹಾಕಾರ್ಯ ಮತ್ತೆ ಚಾಲನೆ ಪಡೆಯುವಂತೆ ಮಾಡಲು ಆಗಸ್ಟ್ 14 ರಿಂದ ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ 'ಬದುಕಿನ ಸ್ವಾತಂತ್ರ್ಯಕ್ಕಾಗಿ ಬಡವರ ಬರಿಹೊಟ್ಟೆ ಸತ್ಯಾಗ್ರಹ' ನಡೆಸಲು ತೀರ್ಮಾನಿಸಲಾಗಿದೆ ಎಂದರು.

ಗೋಷ್ಟಿಯಲ್ಲಿ ಜಿಲ್ಲಾ ಮುಖಂಡರಾದ ಸತ್ಯಪ್ಪ ಮಲ್ಲಾಪುರ, ದುರುಗೇಶಪ್ಪ, ವೆಂಕಟೇಶ್ ಬಿ.ಬಿ.ಹಟ್ಟಿ, ಹನುಮಯ್ಯ ಸಣ್ಣ ವೀರಪ್ಪ ಸೇರಿದಂತೆ ಇತರರು ಭಾಗವಹಿಸಿದ್ದರು.

# ಪೈಪ್‌ಲೈನ್ ಸ್ಥಿತಿಗತಿ ಪರಿಶೀಲಿಸಿ, ಲೀಕೇಜ್‌ಗಳಿದ್ದಲ್ಲಿ ಸರಿಪಡಿಸಿ – ಸಚಿವ ಎಂ. ರಹೀಂ ಖಾನ್

ಚಿತ್ರದುರ್ಗ : ಕವಾಡಿಗರ ಹಟ್ಟಿಯಲ್ಲಿ ಕಲುಷಿತ ನೀರಿನಿಂದ ಉಂಟಾದ ಸಾರ್ವಜನಿಕ ಸಾವು, ನೋವುಗಳು ಮತ್ತೆಂದಿಗೂ ಮರುಕಳಿಸಬಾರದು, ಈ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲ ನಗರ, ಸ್ಥಳೀಯ ಸಂಸ್ಥೆಗಳ ಎಲ್ಲ ವಾರ್ಡ್‌ಗಳ ನೀರು ಪೂರೈಕೆ ಪೈಪ್‌ಲೈನ್ ಸ್ಥಿತಿಗತಿ ಪರಿಶೀಲಿಸಿ, ಒಂದು ವೇಳೆ ಯಾವುದೇ ಲೀಕೇಜ್ ಕಂಡುಬಂದಲ್ಲಿ ಕೂಡಲೇ ಅದನ್ನು ಸರಿಪಡಿಸುವ ಕಾರ್ಯ ಆಗಬೇಕು ಎಂದು ಪೌರಾಡಳಿತ ಹಾಗೂ ಹಜ್ ಸಚಿವ ಎಂ. ರಹೀಂ ಖಾನ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಭಾನುವಾರ ಏರ್ಪಡಿಸಲಾಗಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕವಾಡಿಗರ ಹಟ್ಟಿಯಲ್ಲಿ ನಡೆದಂತಹ ಘಟನೆಯನ್ನು ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದೆ. ಘಟನೆಗೆ ಪ್ರಮುಖ ಕಾರಣಗಳೇನು ಎಂಬುದನ್ನು ತಜ್ಞರ ತಂಡ ಸಮರ್ಪಕವಾಗಿ ಪರಿಶೀಲಿಸಿ ವರದಿ ಸಲ್ಲಿಸಬೇಕು ಎಂದು ಸಚಿವರು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ. ಪರಶುರಾಮ್ ಅವರು ಮಾತನಾಡಿ, ಮೃತಪಟ್ಟ ವ್ಯಕ್ತಿಗಳ ಮರಣೋತ್ತರ ಪರೀಕ್ಷೆ ವರದಿ ಹಾಗೂ ಉಳಿದ ಎಫ್‌ಎಸ್‌ಎಲ್ ಪರೀಕ್ಷಾ ವರದಿ ಸೋಮವಾರದ ವೇಳೆಗೆ ಲಭ್ಯವಾಗುವ ಸಾಧ್ಯತೆಗಳಿದ್ದು, ವರದಿ ಬಂದ ಬಳಿಕ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಮಾತನಾಡಿ, ಘಟನೆಗೆ ಕಾರಣವಾದ ಅಂಶಗಳು ಹಾಗೂ ಸಮೀಕ್ಷೆಗೆ ರಾಜ್ಯದಿಂದ ತಜ್ಞ ವೈದ್ಯರುಗಳ ತಂಡ ಜಿಲ್ಲೆಗೆ ಆಗಮಿಸಿ, ಸರ್ವೆ ಕಾರ್ಯ ಕೈಗೊಂಡಿದೆ, ಈ ತಂಡವು ಕೂಡ ಕೆಲವು ಅಂಶಗಳನ್ನು ಸಲ್ಲಿಸಿದ್ದು, ಮುಂದಿನ ದಿನಗಳಲ್ಲಿ ದುರ್ಘಟನೆ ಮರುಕಳಿಸದಂತೆ ಆಗಲು, ಅವರಿಂದಲೂ ಕೂಡ ಸಲಹೆಗಳನ್ನು ಪಡೆಯಲಾಗುತ್ತಿದೆ. ಕವಾಡಿಗರ ಹಟ್ಟಿ ಶಾಲೆಯಲ್ಲಿ ತಾತ್ಕಾಲಿಕ ಚಿಕಿತ್ಸಾ ಕೇಂದ್ರ ತೆ–ರೆದು ಅಲ್ಲಿನ ಜನರ ಆರೋಗ್ಯ ತಪಾಸಣೆ ಮತ್ತು 24*7 ಸೇವೆ ಲಭ್ಯವಿರುವಂತೆ ವ್ಯವಸ್ಥೆ ಮಾಡಲಾಗಿದೆ. ಮೃತರ ಕುಟುಂಬಗಳಿಗೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ 05 ಲಕ್ಷ ಹಾಗೂ ನಗರಸಭೆ ನಿಧಿಯಿಂದ 05 ಲಕ್ಷ ಸೇರಿದಂತೆ ಒಟ್ಟು ತಲಾ 10 ಲಕ್ಷ ರೂ. ಗಳಂತೆ ಪರಿಹಾರ ವಿತರಿಸಲಾಗಿದೆ ಎಂದರು.

ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕರಾದ ಮಂಜುಶ್ರೀ ಅವರು ಮಾತನಾಡಿ, ನಗರ, ಸ್ಥಳೀಯ ಸಂಸ್ಥೆಗಳು ಹೆಸರಿಗಷ್ಟೇ ಟ್ಯಾಂಕ್‌ಗಳನ್ನು ಏಜೆನ್ಸಿಗಳ ಮೂಲಕ ಸ್ವಚ್ಛ ಮಾಡಿಸುತ್ತಾರೆ, ಅದಕ್ಕೆ ಖರ್ಚು ಕೂಡ ಹಾಕುತ್ತಾರೆ, ಆದರೆ ಸರಿಯಾದ ರೀತಿಯಲ್ಲಿ ಸ್ವಚ್ಛ ಮಾಡಿರುವುದಿಲ್ಲ. ನೀರು ಸಂಗ್ರಹಾಗಾರಗಳನ್ನು ಸ್ವಚ್ಛಗೊಳಿಸುವುದಕ್ಕೆ ಸಂಬಂಧಿಸಿದಂತೆ ಇಲಾಖೆಯಿಂದ ಸಂಪೂರ್ಣ ವಿವರಗಳೊಂದಿಗೆ



ಸುತ್ತೋಲೆಯನ್ನು ಹೊರಡಿಸಲಾಗಿದೆ ಎಂದರು.

ಚಿತ್ರದುರ್ಗ ಶಾಸಕ ಕೆ.ಸಿ. ವೀರೇಂದ್ರ ಅವರು ಮಾತನಾಡಿ, ಕವಾಡಿಗರ ಹಟ್ಟಿಯಲ್ಲಿನ ಪ್ರಕರಣ ನಿಜಕ್ಕೂ ಗಂಭೀರವಾಗಿದ್ದು, ಇಲ್ಲಿನ ಸಾರ್ವಜನಿಕರಿಗೆ ಸಮರ್ಪಕವಾಗಿ ಆಹಾರ, ಸಾಮಗ್ರಿಗಳನ್ನು ಪೂರೈಕೆ ಮಾಡಲಾಗುತ್ತಿದೆ. ಪರಿಹಾರದ ಮೊತ್ತ ಮೃತ ವ್ಯಕ್ತಿಗಳ ವಾರಸುದಾರರಿಗೆ ಸಮರ್ಪಕವಾಗಿ ತಲುಪುವ ಬಗ್ಗೆ ಅಧಿಕಾರಿಗಳು ಖಾತ್ರಿ ಮಾಡಿಕೊಳ್ಳಬೇಕು, ಇದು ಭವಿಷ್ಯದಲ್ಲಿ ಅವರ ಮಕ್ಕಳು ಅಥವಾ ವಾರಸುದಾರರಿಗೆ ಉತ್ತಮ ಬದುಕು ಕಲ್ಪಿಸಿಕೊಡುವಂತಾಗಬೇಕು ಎಂದರು.

ಈ ಸಭೆಯಲ್ಲಿ ಹೊಳಲ್ಕೆರೆ ಶಾಸಕ ಎಂ.ಚಂದ್ರಪ್ಪ, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ರಂಗನಾಥ್ ಸೇರಿದಂತೆ ವಿವಿಧ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು, ಮುಖ್ಯಾಧಿಕಾರಿಗಳು ಭಾಗವಹಿಸಿದ್ದರು.

**ಫಾಸ್ಟ್ ನ್ಯೂಸ್**

## ರಾಜ್ಯ ಮಟ್ಟದ ಪ್ರತಿಭಾ ಪುರಸ್ಕಾರ

**ಹೊಸದುರ್ಗ** : ರಾಜ್ಯದ ಉಪ್ಪಾರ ಸಮುದಾಯದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸಚಿವರು ಮತ್ತು ಶಾಸಕರುಗಳಿಗೆ ಸನ್ಮಾನ ಸಮಾರಂಭವನ್ನು ಆಗಸ್ಟ್ 20.ರಂದು ಬ್ರಹ್ಮವಿದ್ಯಾನಗರದ ಶ್ರೀಮಠದ ಆವರಣದಲ್ಲಿ ಏರ್ಪಡಿಸಲಾಗಿದೆ ಎಂದು ಭಗೀರಥ ಗುರುಪೀಠದ ಪುರುಷೋತ್ತಮಾನಂದಪುರಿ ಸ್ವಾಮೀಜಿ ಪೂರ್ವಭಾವಿ ಸಭೆಯಲ್ಲಿ ಹೇಳಿದರು.

ವಿಧಾನಸಭಾ ಸಭಾಧ್ಯಕ್ಷ ಯು.ಟಿ.ಖಾದರ್ ಸಚಿವರುಗಳಾದ ಶಿವರಾಜ್ ತಂಗಡಗಿ, ಸತೀಶ್ ಜಾರಕಿಹೊಳಿ, ಡಿ.ಸುಧಾಕರ್, ಕೆ.ಎನ್ ರಾಜಣ್ಣ, ಹೆಚ್.ಸಿ. ಮಹಾದೇವಪ್ಪ ಮತ್ತು ಚಾಮರಾಜನಗರ ಕ್ಷೇತ್ರದ ಶಾಸಕ ಪುಟ್ಟರಂಗಶೆಟ್ಟಿ ಸೇರಿದಂತೆ ಜಿಲ್ಲೆಯ ಎಲ್ಲಾ ಶಾಸಕರುಗಳು ಹಾಗೂ ರಾಜ್ಯದ ವಿವಿಧ ಶಾಸಕರುಗಳು, ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಳೆದ ಎಸ್ಸೆಸ್ಸೆಲ್ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳಿಸಿದ (ಉನ್ನತ ಶ್ರೇಣಿಯಲ್ಲಿ ಉತ್ತೀರ್ಣರಾದ) ಉಪ್ಪಾರ ಸಮುದಾಯದ ವಿದ್ಯಾರ್ಥಿಗಳಿಗೆ ಅಭಿನಂದಿಸಲಾಗುವುದು.

ಕಾರ್ಯಕ್ರಮಕ್ಕೆ ಸುಮಾರು 3.ಸಾವಿರಕ್ಕೂ ಅಧಿಕ ಜನ ಸೇರುವ ನಿರೀಕ್ಷೆಯಿದೆ. ಬರುವ ಜನರಿಗೆ ಉತ್ತಮ ಉಪಹಾರ ಹಾಗೂ ಭೋಜನ ವ್ಯವಸ್ಥೆ ಏರ್ಪಡಿಸಲಾಗುವುದು ಎಂದು ಮಾಹಿತಿ ನೀಡಿದರು.

'ಭೆಯಲ್ಲಿ ರಾಜ್ಯ ಉಪ್ಪಾರ ಸಂಘದ ಗೌರವಾಧ್ಯಕ್ಷ ತುರ್ಚಘಟ್ಟ ಬಸವರಾಜಪ್ಪ, ಹೊಸದುರ್ಗ ತಾಲ್ಲೂಕು ಉಪ್ಪಾರ ಸಂಘದ ಅಧ್ಯಕ್ಷ ಪಿ.ಕೆ.ಪರಪ್ಪ, ಜಿಲ್ಲಾ ಸಂಘದ ಗೌರವಾಧ್ಯಕ್ಷ ನಾಗರಾಜ್, ಮುಖಂಡರುಗಳಾದ ತಿಪ್ಪಣ್ಣ, ಗಿರೀಶ್, ಮತ್ತಿ ಹನುಮಂತಪ್ಪ, ಆರ್.ಮೂರ್ತಿ, ತಿಪ್ಪೇಶಪ್ಪ , ಲಕ್ಷ್ಮಯ್ಯ, ಮಧುರೆ ನಟರಾಜ್, ಮಲ್ಲಿಕಾರ್ಜುನ, ಹೇರೂರು ಮಂಜುನಾಥ್, ಅಶೋಕ್ ಸೇರಿದಂತೆ ಹಲವರ ಸಮ್ಮುಖದಲ್ಲಿ ವಿವಿಧ ಸಮಿತಿ ರಚಿಸಿ ಜವಾಬ್ದಾರಿ ನೀಡಲಾಯಿತು.

## ಫಲಾನುಭವಿಗಳ ಪಟ್ಟಿ ಪ್ರಕಟ

**ದಾವಣಗೆರೆ** : ಮಲೆಬೆನ್ನೂರು ಪುರಸಭೆ ವ್ಯಾಪ್ತಿಯಲ್ಲಿ 2016–17 ರಿಂದ 2022–23 ನೇ ಸಾಲಿನಲ್ಲಿ ಸಾಮಾನ್ಯ ಮತ್ತು ಎಸ್.ಎಫ್.ಸಿ ಮುಕ್ತನಿಧಿಯ ವಿವಿಧ ಕಲ್ಯಾಣ ಕಾರ್ಯಕ್ರಮದಡಿ ಆಯ್ಕೆಯಾದ ವೈಯಕ್ತಿಕ ಫಲಾನುಭವಿಗಳ ಪಟ್ಟಿಯನ್ನು ಪ್ರಕಟಿಸಲಾಗಿದೆ. ಈ ಕುರಿತು ಆಕ್ಷೇಪಣೆಗಳಿದ್ದಲ್ಲಿ 7 ದಿನಗಳೊಳಗಾಗಿ ಪೂರಕ ದಾಖಲೆಗಳೊಂದಿಗೆ ಸಲ್ಲಿಸಲು ಮಲೆಬೆನ್ನೂರು ಪುರಸಭೆ ಮುಖ್ಯಾಧಿಕಾರಿ ಸುರೇಶ್.ಎ ತಿಳಿಸಿದ್ದಾರೆ.

## ವಿದ್ಯಾರ್ಥಿಗಳಿಂದ ಅಗ್ನಿಶಾಮಕ ಠಾಣೆಗೆ ಭೇಟಿ ನೀಡಿ

**ಹೊಸದುರ್ಗ** : ಪಟ್ಟಣದ ಹೊರವಲಯದ ಮಧುರೆ ದಿಬ್ಬದ ಬಳಿ ಇರುವ ಸಂದೀಪಿನಿ ಶಾಲೆಯ ವಿದ್ಯಾರ್ಥಿಗಳು ಶನಿವಾರದಂದು ಅಗ್ನಿಶಾಮಕ ಠಾಣೆಗೆ ಭೇಟಿ ನೀಡಿ, ಇಲಾಖೆಯ ಕರ್ತವ್ಯ ಬಗ್ಗೆ ಮಾಹಿತಿ ಪಡೆದುಕೊಂಡರು.

ಅಗ್ನಿಶಾಮಕ ದಳದ ಠಾಣಾಧಿಕಾರಿ ಬಿ.ಎಸ್. ಗುಡೆನಕಟ್ಟೆ, ವಿದ್ಯಾರ್ಥಿಗಳಿಗೆ ಅಗ್ನಿ ಅವಘಡ ಮತ್ತು ದುರಂತ ಸಂಭವಿಸಿದಾಗ, ಯಾವ ರೀತಿಯಾಗಿ ನಂಬಿಸಲು ಪ್ರಯತ್ನಿಸಬೇಕು. ಸುರಕ್ಷಿತವಾಗಿ ಯಾವ ರೀತಿಯಾಗಿ ಇರಬೇಕೆಂದು ಪ್ರಾಯೋಗಿಕವಾಗಿ ಮಕ್ಕಳಿಗೆ ತಿಳಿಸಿಕೊಟ್ಟರು. ವಿದ್ಯಾರ್ಥಿಗಳು ತುಂಬಾ ಕುತೂಹಲ ಭರಿತರಾಗಿ ಬೆಂಕಿ ನಂದಿಸುವ ವಿಧಾನದ ಬಗ್ಗೆ ತಿಳಿದುಕೊಂಡರು.

ಈ ವೇಳೆ ಅಗ್ನಿಶಾಮಕ ಠಾಣೆಯ ರಂಗಸ್ವಾಮಿ ಮತ್ತು ಸಿಬ್ಬಂದಿ ವರ್ಗದವರು, ಸಂದೀಪಿನಿ ಶಾಲೆಯ ಶಿಕ್ಷಕರಾದ ರಮೇಶ್, ನಾಗರಾಜ್, ಶ್ರೀನಿವಾಸ್, ಶಿವಕುಮಾರ್, ಮಾನಸ ಮತ್ತು ಕವಿತಾ ಸೇರಿದಂತೆ ಶಾಲಾ ಸಿಬ್ಬಂದಿಗಳಿದ್ದರು.

# ಸಹಾಯಕ ಕಾರ್ಯಪಾಲಕ ಇಂಜಿನಿಯರಾಗಿ ಕೆ. ನಾಗನ ಗೌಡ ಅಧಿಕಾರ ಸ್ವೀಕಾರ

**ಮೊಳಕಾಲ್ಮುರು** : ಮೊಳಕಾಲ್ಮುರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗದ ಸಹಾಯಕ ಕಾರ್ಯ ಪಾಲಕ ಇಂಜಿನಿಯರ್ ಹುದ್ದೆಗೆ ಕೆ. ನಾಗನಗೌಡ ಅವರು ನೇಮಕ ವಾಗಿದ್ದು ಅಧಿಕಾರ ಸ್ವೀಕರಿಸಿದ ಅವರಿಗೆ ಪಟ್ಟಣ ಪಂಚಾಯತಿ ಸದಸ್ಯ ಹಾಗೂ ಪ್ರಥಮ ದರ್ಜೆ ಗುತ್ತಿಗೆದಾರ ಎಸ್ ಖಾದರ್ ರವರು ಶಾಲು ಹೊದಿಸಿ ಹೂವಿನ ಹಾರ ಹಾಕಿ ಸನ್ಮಾನಿಸಿ ಶುಭಕೋರಿದರು

ಪಟ್ಟಣದ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗದ ಕಚೇರಿಯಲ್ಲಿ ಅಧಿಕಾರ ಸ್ವೀಕರಿಸಿದ ಸಹಾಯ ಕಾರ್ಯ ಪಾಲಕ ಇಂಜಿನಿಯರ್ ಕೆ. ನಾಗನ ಗೌಡ ರವರನ್ನು ಸನ್ಮಾನಿಸಲಾಯಿತು

ಮೊಳಕಾಲ್ಮುರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗದ ಸಹಾಯಕ ಕಾರ್ಯ ಪಾಲಕ ಇಂಜಿನಿಯರ್ ಸೋಮಲನಾಯ್ಕ್ ರವರ ವರ್ಗಾವಣೆ ಯಿಂದ ತೆರುವಾಗಿದ್ದ ಹುದ್ದೆಗೆ ಕೆ. ನಾಗನಗೌಡ ರವರನ್ನು ಸರ್ಕಾರ ನೇಮಕ ಮಾಡಿ ಅದೇಶಿಸಿದ್ದು ಕಾರ್ಯದೇಶದ ಅನ್ವಯ ಅಧಿಕಾರ ಸ್ವೀಕರಿಸಿದ ಸಹಾಯಕ ಇಂಜಿನಿಯರ್ ಕೆ. ನಾಗನಗೌಡ ರವರನ್ನು ಸನ್ಮಾನಿಸಿ ನಮ್ಮ ತಾಲ್ಲೂಕಿನ ಅಭಿವೃದ್ಧಿಗೆ ನಿಮ್ಮ ಉತ್ತಮ ಸೇವೆ ಅಗತ್ಯವಾಗಿದೆ ಎಂದು ಆಶಿಸಿದರು. ಇಸ್ಮಾಯಿಲ್, ಬಡೋಬಯ್ಯ, ಅಪ್ಪಿ ಮಲ್ಲಿಕಾರ್ಜುನ, ಜಯಪ್ಪ, ನಬಿ, ನಾಗರಾಜ, ಕಿರಿಯ ಇಂಜಿನಿಯರ್ ಗಳಾದ ಜಬಿ, ಶ್ರೀಕಾಂತ್ ಹಾಗೂ ಸಿಬ್ಬಂದಿ ಮುಂತಾದವರು ಉಪಸ್ಥಿತರಿದ್ದರು



ಮೊಳಕಾಲ್ಮುರು ಪಟ್ಟಣದ ಪಂಚಾಯತ್ ರಾಜ್ ಇಂಜಿನಿಯರ್ ಉಪ ವಿಭಾಗದ ಕಚೇರಿಯಲ್ಲಿ ಸಹಾಯ ಕಾರ್ಯ ಪಾಲಕ ಇಂಜಿನಿಯರ್ ಕೆ. ನಾಗನಗೌಡ ರವರನ್ನು ಸನ್ಮಾನಿಸಿ ತಾಲ್ಲೂಕಿನ ಅಭಿವೃದ್ಧಿಯ ಬಗ್ಗೆ ಚರ್ಚಿಸಿದರು

# ಚಿಕ್ಕೇರಳ್ಳಿ ಗ್ರಾ.ಪಂ ಅಧ್ಯಕ್ಷ / ಉಪಾಧ್ಯಕ್ಷರಾಗಿ ಅವಿರೋಧ ಆಯ್ಕೆ



ಮೊಳಕಾಲ್ಮುರು ತಾಲ್ಲೂಕಿನ ಚಿಕೇರಿಹಳ್ಳಿ ಗ್ರಾಮ ಪಂಚಾಂಯಿತಿಯಲ್ಲಿ ಅವಿರೋದವಾಗಿ ಆಯ್ಕೆಯಾದ ಅಧ್ಯಕ್ಷ ಮತ್ತು ಉಪಾಧ್ಯಕ್ಷರಿಗೆ ಸನ್ಮಾನಿಸಲಾಯಿತು

**ಮೊಳಕಾಲ್ಮುರು** : ಮೊಳಕಾಲ್ಮೂರು ತಾಲೂಕಿನ ಚಿಕ್ಕೇರಹಳ್ಳಿ ಗ್ರಾಮ ಪಂಚಾಯಿತಿ ಚುನಾವಣೆಯ ಎರಡನೇ ಅವಧಿಗೆ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳಿಗೆ ಚುನಾವಣೆ ನಡೆಸಲಾಯಿತು ಚುನಾವಣೆಯಲ್ಲಿ ಅಧ್ಯಕ್ಷರಾಗಿ ಕಮಲಕ್ಕ ಉಪಾಧ್ಯಕ್ಷರಾಗಿ ಎಂ. ಗೀತಾ ಅವಿರೋದವಾಗಿ ಆಯ್ಕೆಯಾಗಿರುವುದಾಗಿ ಚುನಾವಣಾಧಿಕಾರಿ ಘೋಷಿಸಿದರು

ಪ. ಜಾತಿಗೆ ಅಧ್ಯಕ್ಷ ಸ್ಥಾನ ಮತ್ತು ಪ.ಪಂಗಡಕ್ಕೆ ಉಪಾಧ್ಯಕ್ಷ ಸ್ಥಾನಕ್ಕೆ ಮೀಸಲಾಗಿದ್ದು, ಅಧ್ಯಕ್ಷ ಸ್ಥಾನಕ್ಕೆ ಕಮಲಕ್ಕ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಎಂ ಗೀತಾ ನಾಮಪತ್ರ ಸಲ್ಲಿಸಿದ್ದರು

ನಾಮಪತ್ರ ಸಲ್ಲಿಸಿದ ಅಭ್ಯರ್ಥಿಗಳ ವಿರುದ್ಧ ಯಾರೊಬ್ಬರೂ ನಾಮಪತ್ರ ಸಲ್ಲಿಸದ ಕಾರಣದಿಂದಾಗಿ ಅಧ್ಯಕ್ಷ ಸ್ಥಾನಕ್ಕೆ ಉಮೇದುವಾರಿಕೆ ಸಲ್ಲಿಸಿದ ಕಮಲಕ್ಕ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಉಮೇದುವಾರಿಕೆ ಸಲ್ಲಿಸಿದ್ದ ಎಂ.ಗೀತಾ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದೂ ಚುನಾವಣಾಧಿಕಾರಿಯಾದ ಪಾತಲಿಂಗಪ್ಪ ಫಲಿತಾಂಶ ಪ್ರಕಟಿಸಿದರು

ಸಂದರ್ಭದಲ್ಲಿ ಚುನಾವಣಾಧಿಕಾರಿ ಪಾತಲಿಂಗಪ್ಪ ಪಿಡಿಓ ಪಾಪನಾಯಕ ಗ್ರಾಮ ಪಂಚಾಯಿತಿ ಸದಸ್ಯರು ಊರಿನ ಮುಖಂಡರು ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿ ಉಪಸ್ಥಿತರಿದ್ದರು.

# ರಾಜಿ ಸಂಧಾನದಿಂದ ನೆಮ್ಮದಿಯುತ ಜೀವನ : ನ್ಯಾ. ಬಿ.ಎಸ್. ರೇಖಾ

**ಚಿತ್ರದುರ್ಗ** : ರಾಷ್ಟ್ರೀಯ ಹಾಗೂ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ನಿರ್ದೇಶನದಂತೆ ಜಿಲ್ಲಾ ಹಾಗೂ ಎಲ್ಲಾ ತಾಲ್ಲೂಕು ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ರಾಜಿ ಸಂಧಾನ ಮೂಲಕ ಇತ್ಯರ್ಥಪಡಿಸಲು ಸೆಪ್ಟಂಬರ್ 09 ರಂದು ಬೃಹತ್ ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದು ಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಎಸ್. ರೇಖಾ ಅವರು ಮನವಿ ಮಾಡಿದ್ದಾರೆ.

ಜಿಲ್ಲೆಯಲ್ಲಿ ಬರುವ ಸೆ. 09 ರಂದು ಏರ್ಪಡಿಸಲಾಗಿರುವ ಬೃಹತ್ ರಾಷ್ಟ್ರೀಯ ಲೋಕ ಅದಾಲತ್ ಕುರಿತಂತೆ ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ಸೋಮವಾರ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದರು.

ರಾಜೀಯಾಗಬಲ್ಲ ಅಪರಾಧಿಕ ಪ್ರಕರಣ, ಚೆಕ್ಕು ಅಮಾನ್ಯ, ಬ್ಯಾಂಕ್ ವಸೂಲಾತಿ, ಮೋಟಾರು ವಾಹನ ಅಪಘಾತ ಪರಿಹಾರ ನ್ಯಾಯಾಧೀಕರಣ ಪ್ರಕರಣಗಳು, ಕಾರ್ಮಿಕ ವಿವಾದಗಳು, ವಿದ್ಯುತ್ ಹಾಗೂ ನೀರಿನ ಶುಲ್ಕಗಳು, ಆಸ್ತಿ ವಿಭಾಗ, ಬ್ಯಾಂಕ್ ಕ್ಲೇಮ್‌ಗಳು, ವೈವಾಹಿಕ, ಭೂಸ್ವಾಧೀನ, ವೇತನ ಮತ್ತು ಭತ್ಯೆಗೆ ಸಂಬಂಧಿಸಿದ ಸೇವಾ ಪ್ರಕರಣಗಳು ಹಾಗೂ ಪಿಂಚಣಿ ಪ್ರಕರಣಗಳು, ಕಂದಾಯ ಹಾಗೂ ರಾಜೀಯಾಗಬಲ್ಲ ಸಿವಿಲ್ ಮತ್ತು ಇತರೆ ಪ್ರಕರಣಗಳನ್ನು ಲೋಕ ಅದಾಲತ್ ಮೂಲಕ ಬಗೆಹರಿಸಲಾಗುವುದು.

ಜಿಲ್ಲೆಯಲ್ಲಿ ಒಟ್ಟು 39731 ಪ್ರಕರಣಗಳು ಬಾಕಿ ಇದ್ದು, ಹೆಚ್ಚಿನ ಸಂಖ್ಯೆಯ ಪ್ರಕರಣಗಳನ್ನು ಅದಾಲತ್‌ನಲ್ಲಿ ಇತ್ಯರ್ಥಪಡಿಸಲು ಯತ್ನಿಸಲಾಗುವುದು. ಲೋಕ ಅದಾಲತ್ ಪ್ರಕರಣಗಳನ್ನು ಇತ್ಯರ್ಥ ಪಡಿಸಲು ಸಮಯಾವಕಾಸ ಕಡಿಮೆಯಾಗು ವುದರಿಂದ, ಇದಕ್ಕೂ ಮುನ್ನ, ಪ್ರತಿ ದಿನ ನ್ಯಾಯಾಲಯಗಳಲ್ಲಿ ಪ್ರಕರಣಗಳ ಇತ್ಯರ್ಥಕ್ಕೆ ಪೂರ್ವಭಾವಿ ಅದಾಲತ್‌ಗಳನ್ನು ಏರ್ಪಡಿಸಲಾಗುವುದು. ರಾಜಿ ಸಂಧಾನದ ಮೂಲಕ ತ್ವರಿತವಾಗಿ ಪ್ರಕರಣ ಇತ್ಯರ್ಥಗೊಂಡಲ್ಲಿ, ಉಭಯ ಪಕ್ಷಕಾರರು ಸುಖ, ಸಂತೋಷ, ನೆಮ್ಮದಿಯ ಜೀವನ ನಡೆಸಲು ಅನುಕೂಲವಾಗಲಿದೆ, ಅಲ್ಲದೆ ಆರ್ಥಿಕ ಹೊರೆ ಕಡಿಮೆಯಾಗಲಿದೆ.

ಉಭಯ ಪಕ್ಷಕಾರರು ರಾಜೀ ಸಂಧಾನಕ್ಕೆ ಸೂಕ್ತ ಮಾರ್ಗದರ್ಶನ ಮಾಡಲಾಗುವುದು. ಇಬ್ಬರಿಗೆ ಒಪ್ಪಿಗೆ ರೀತಿಯಲ್ಲಿ ತೀರ್ಮಾನ ಮಾಡುವುದರಿಂದ ಬಾಂಧವ್ಯವು ಉಳಿದು ವಿವಾದವು ತೀರ್ಮಾನವಾಗುತ್ತದೆ.

ನ್ಯಾಯಾಲಯದಲ್ಲಿ ದಾಖಲಾಗದೇ ಇರುವ ಪ್ರಕರಣಗಳನ್ನು ಸಹ ರಾಜೀ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ರಾಜೀ ಸಂದಾನದ ಮೂಲಕ



ಪ್ರಕರಣಗಳನ್ನು ಇತ್ಯಾರ್ಥ ಪಡಿಸಿಕೊಂಡರೆ ನ್ಯಾಯಾಲಯಕ್ಕೆ ಪಾವತಿಸಿದ ನ್ಯಾಯಾಲಯ ಶುಲ್ಕವನ್ನು ಪೂರ್ಣವಾಗಿ ಮರು ಪಾವತಿಸಲಾಗುವುದು.

ಸಂಧಾನಕಾರರು ಸೂಚಿಸುವ ಪರಿಹಾರ ಒಪ್ಪಿಗೆಯಾದಲ್ಲಿ ಮಾತ್ರ ರಾಜೀ ಮಾಡಿಕೊಳ್ಳಬಹುದು. ಕಡಿಮೆ ಖರ್ಚಿನಲ್ಲಿ ಶೀಘ್ರ ತೀರ್ಮಾನಕ್ಕೆ ಇದೊಂದು ವಿಶೇಷ ಅವಕಾಶವಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ದೂರವಾಣಿ ಸಂಖ್ಯೆ 08194–222322, 9141193935 ಸಂಪರ್ಕಿಸಬಹುದು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಎಸ್. ರೇಖಾ ಅವರು ಹೇಳಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ. ವಿಜಯ್ ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T